ಸಂಪುಟ : 10 ಸಂಚಿಕೆ: 29 ಪುಟ : 4+2 ಬೆಲೆ: 3.00 ಗುರುವಾರ ಫೆಬ್ರವರಿ 27 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 29 Pages : 4+2 Price : 3.00 Thursday February 27 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಸಿದ್ದರಾಮಯ್ಯ ಬೆಂಕಿ ಇದ್ದಂತೆ, ಯಾರಿಂದಲೂ ಮುಟ್ಟೋಕಾಗಲ್ಲ

■ವಿಜಯಸಾಕ್ಷಿ ಸುದ್ದಿ, ವಿಜಯನಗರ



ಸಿದ್ದರಾಮಯ್ಯ ಬೆಂಕಿ ಇದ್ದಂತೆ, ಯಾರಿಂದಲೂ ಮುಟ್ಟೋಕಾಗಲ್ಲ, ಮುಟ್ಟಿದ್ರೆ ಭಸ್ಮ ಆಗ್ತಾರೆ ಎಂದು ಸಚಿವ ಜಮೀರ್ ಅಹಮ್ಮದ್ ಹೇಳಿದ್ದಾರೆ.

ವಿಜಯನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಇದ್ದಾರೆ, ಸಿಎಂ ಸ್ಥಾನದಲ್ಲಿ ಸಿದ್ದರಾಮಯ್ಯ ಇದ್ದಾರೆ. ಖಾಲಿ ಇದ್ರೆ ತಾನೇ ಚರ್ಚೆ, ಸಿಎಂ ಸಿದ್ದರಾಮಯ್ಯ ಖುರ್ಚಿ ಮುಟ್ಟೋಕೆ ಸಾಧ್ಯ ಏನ್ರಿ? ಎಂದು ರೋಷಾವೇಶದಿಂದ ಜಮೀರ್ ಅಹ್ಮದ್ ಮಾತನಾಡಿದ್ದಾರೆ.

ನಮ್ಮ ಪಕ್ಷ ಹೈಕಮಾಂಡ್ ಪಕ್ಷ, ಹೈ ಕಮಾಂಡ್ ನಿರ್ಧಾರಕ್ಕೆ ಬದ್ಧ. ಹೈಕಮಾಂಡ್ ಬದಲಾವಣೆ ಮಾಡಬೇಕು ಅಂತ ನಿರ್ಧಾರ ಮಾಡಿದ್ರೆ ನಾವು ಅಭಿಪ್ರಾಯ ತಿಳಿಸಬಹುದು. ಆದ್ರೆ ಹೈಕಮಾಂಡ್ ಯಾವುದೇ ನಿರ್ಧಾರಕ್ಕೆ ಇನ್ನೂ ಬಂದಿಲ್ಲ.

ನಮ್ಮ ಪಕ್ಷದವರು ಯಾರೂ ಕೂಡ ಸಿದ್ದರಾಮಯ್ಯ ಬದಲಾವಣೆ ಮಾಡಲಿ ಅಂತಲೂ ಹೇಳಿಲ್ಲಾ. ಎಲ್ಲಾ ಸಮಾಜಕ್ಕೂ ಸಿಎಂ ಆಗಬೇಕು ಅಂತ ಆಸೆ ಇರುತ್ತೆ. ದಲಿತ, ಅಲ್ಪಸಂಖ್ಯಾತ, ಎಸ್ಸಿ, ಎಸ್ಟಿ, ಲಿಂಗಾಯತ ಸಮುದಾಯ ಎಲ್ಲರೂ ಸಿಎಂ ಆಗಬೇಕು ಅಂತಾರೆ. ತೀರ್ಮಾನ ಹೈ ಕಮಾಂಡ್‌ಗೆ ಬಿಟ್ಟಿದ್ದು ಎಂದರು.

## ಪಂ. ಡಾ. ಪುಟ್ಟರಾಜ ಗವಾಯಿಗಳವರ ಜಯಂತ್ಯುತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಡಾ. ವ್ಹಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನ ಗದಗ ಹಾಗೂ ಅಶ್ವಿನಿ ಪ್ರಕಾಶನ ಗದಗ ವತಿಯಿಂದ ಪಂಡಿತ ಡಾ. ಪುಟ್ಟರಾಜ ಗವಾಯಿಗಳವರ 111ನೇ ಜಯಂತ್ಯುತ್ಸವದ ಪ್ರಯುಕ್ತ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭ, ಕವಿಗೋಷ್ಠಿ ಮತ್ತು ಶ್ರೀಗಳಿಗೆ ತುಲಾಭಾರ ಕಾರ್ಯಕ್ರಮ ದಿನಾಂಕ ಮಾರ್ಚ್ 3ರಂದು ನಗರದ ಶ್ರೀ ಸಾಯಿ ಜ್ಞಾನಯೋಗಾಶ್ರಮದ ಎದುರಿನ ರಾಜಲಕ್ಷ್ಮೀ ನಿಲಯದಲ್ಲಿ ಹಮ್ಮಿಕೊಂಡಿದೆ. ದಿವ್ಯ ಸಾನ್ನಿಧ್ಯವನ್ನು ಜಗದ್ಗುರು ಅನ್ನದಾನೇಶ್ವರರ ಸಂಸ್ಥಾನ ಶಾಖಾಮಠ ನರಸಾಪೂರದ ಡಾ. ಪರಮಪೂಜ್ಯ ಶ್ರೀ ವೀರೇಶ್ವರ ಶಿವಯೋಗಿಗಳು ವಹಿಸುವರು.

ಉದ್ಘಾಟಕರಾಗಿ ಡಾ. ಪಂಡಿತ ರಾಜಗುರು ಗುರುಸ್ವಾಮಿ ಕಲಕೇರಿ, ಅಧ್ಯಕ್ಷತೆಯನ್ನು ಡಾ ವ್ಹಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನದ ವ್ಹಿ.ವ್ಹಿ. ಹಿರೇಮಠ, ಮುಖ್ಯ ಅತಿಥಿಗಳಾಗಿ ಮಲ್ಲಿಕಾರ್ಜುನ ಗದಿಗಯ್ಯಾ ಭೃಂಗಿಮಠ ದಂಡೋತಿ, ಡಾ. ಶರಣಬಸವ ಎನ್.ವೆಂಕಟಾಪೂರ, ಕೆ.ಎಸ್.ಎಸ್. ಪದವಿ ಮಹಾವಿದ್ಯಾಲಯದ ಡಾ. ರಶ್ಮಿ ಅಂಗಡಿ ಪಾಲ್ಗೊಳ್ಳುವರು.

ವೀರಯ್ಯ ಹೊಸಮಠರಿಂದ ಸಂಗೀತ ಸೇವೆ, ನಾರಾಯಣ ವೀರಪ್ಪ ಹಿರೇಕೊಳ್ಚಿ ಸಭಾ ನಿರೂಪಣೆ ಮಾಡುವರು. ಮಹೇಶ ವಡ್ಡಿನ ಪಾಲ್ಗೊಳ್ಳುವರು ಎಂದು ಪ್ರತಿಷ್ಠಾನದ ಕಾರ್ಯದರ್ಶಿ ಮತ್ತು ಉಪಾಧ್ಯಕ್ಷರಾದ ಪುಟ್ಟರಾಜ ಹಿರೇಮಠ, ಸುಷ್ಮಾ ಹಿರೇಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### * ಮುಕ್ತಿಮಂದಿರ ಧರ್ಮ ಕ್ಷೇತ್ರದಲ್ಲಿ ಮಹಾಶಿವರಾತ್ರಿ ಜಾತ್ರಾ ಮಹೋತ್ಸವ । ಪುಲಿಗೆರೆ ಸೋಮೇಶ್ವರನಿಗೆ ವಿಶೇಷ ಪೂಜೆ

# ಶಿವಪೂಜೆಯಿಂದ ಆತ್ಮಬಲ ವೃದ್ಧಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಿಂಗದೀಕ್ಷೆಯು ಭಗವಂತನನ್ನು ಸಾಕ್ಷಾತ್ಕಾರಪಡಿಸಿಕೊಳ್ಳುವ ಚೈತನ್ಯ ಶಕ್ತಿಸಾಧನವಾಗಿದೆ. ಶ್ರೀಗುರುವಿನಿಂದ ಶಿವದೀಕ್ಷಾ ಸಂಪನ್ನರಾಗಿ ಇಷ್ಟಲಿಂಗ ಪಡೆದು ಪೂಜಿಸಿದರೆ ಮಾನವ ಜನ್ಮ ಸಾರ್ಥಕವಾಗುತ್ತದೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.



ಅವರು ಬುಧವಾರ ಮುಕ್ತಿಮಂದಿರ ಧರ್ಮ ಕ್ಷೇತ್ರದಲ್ಲಿ ಮಹಾಶಿವರಾತ್ರಿ ಜಾತ್ರಾ ಮಹೋತ್ಸವ ಅಂಗವಾಗಿ ಶಿವಲಿಂಗ ಪೂಜೆ, ಜಂಗಮ ವಟುಗಳಿಗೆ ಅಯ್ಯಾಚಾರ-ಲಿಂಗದೀಕ್ಷೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ನೆರವೇರಿಸಿ ಆಶೀರ್ವಚನ ನೀಡಿ, ವೀರಶೈವ ಧರ್ಮದಲ್ಲಿ ಗುರು-ಲಿಂಗ-ಜಂಗಮಕ್ಕೆ ವಿಶಿಷ್ಟ ಸ್ಥಾನಮಾನವಿದೆ. ಲಿಂಗಧಾರಣೆ, ಶಿವಪೂಜೆಯಿಂದ ಆತ್ಮಬಲ ಹೆಚ್ಚುತ್ತದೆ. ಸಮಾಜದಲ್ಲಿನ ಧಾರ್ಮಿಕ ಕಾರ್ಯಗಳಲ್ಲಿ ಪಾಲ್ಗೊಳ್ಳುವ ಹಕ್ಕು ಪ್ರಾಪ್ತವಾಗುತ್ತದೆ.

ವಿಭೂತಿ, ಲಿಂಗ, ಜೋಳಿಗೆ, ದಂಡ ಇವು ಸಂಸ್ಕಾರದ ಸಂಕೇತಗಳಾಗಿವೆ. ವೀರಶೈವ ಲಿಂಗಾಯತ ಸಮಾಜದವರೆಲ್ಲರೂ ನಿತ್ಯ 'ಓಂ ನಮಃ ಶಿವಾಯ' ಶ್ರೇಷ್ಠ ಮಂತ್ರ ಪಠಣ ಮಾಡಬೇಕು. ಲಿಂ. ಗಂಗಾಧರ ಶ್ರೀಗಳು ಮಹಾಶಿವರಾತ್ರಿಗೆ ಮಾಡುತ್ತಿದ್ದ ಎಲ್ಲ ಧಾರ್ಮಿಕ ಕಾರ್ಯಕ್ರಮಗಳನ್ನು ಮುಂದುವರೆಸಿಕೊಂಡು ಹೋಗಲಾಗುತ್ತಿದೆ. ಲಿಂ. ಗಂಗಾಧರ ಜಗದ್ಗುರುಗಳ ಸಂಕಲ್ಪದಂತೆ ಕ್ಷೇತ್ರದಲ್ಲಿ ತ್ರಿಕೋಟಿಲಿಂಗ ಸ್ಥಾಪನೆ ಕಾರ್ಯ ನಡೆದಿದ್ದು, ಈ ಭಾಗದ ಶಿವಭಕ್ತರಿಗೆ ಕಾಶಿ ಕ್ಷೇತ್ರ ದರ್ಶನವಾದಂತೆ ಎಂದು ಹೇಳಿದರು.



ಲಕ್ಷ್ಮೇಶ್ವರ, ಕುಂದಗೋಳ, ಶಿಗ್ಗಾಂವ ತಾಲೂಕಿನ ಕ್ಷೇತ್ರದ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಆಗಮಿಸಿದ್ದರು. ಅನೇಕ ಜಂಗಮ ವಟುಗಳಿಗೆ ಲಿಂಗದೀಕ್ಷೆ ಕಾರ್ಯ ನೆರವೇರಿಸಲಾಯಿತು. ಶಿವಲಿಂಗ ಪೂಜೆ, ಪ್ರಸಾದ ಸೇವೆ ನೆರವೇರಿತು.

ಲಕ್ಷ್ಮೇಶ್ವರ ಸೇರಿದಂತೆ ತಾಲೂಕಿನಾದ್ಯಂತ ಶಿವರಾತ್ರಿ ಹಬ್ಬದ ಆಚರಣೆಯನ್ನು ಬುಧವಾರ ಅತ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು. ಶಿವ-ಪಾರ್ವತಿಯರು ನಂದಿ ಮೇಲೆ ಆಸೀನರಾದ ವಿಶೇಷವಾದ ಪುಲಿಗೆರೆ ಸೋಮೇಶ್ವರನ ಮೂರ್ತಿಗೆ ಜಲಾಭಿಷೇಕ, ಪೂಜೆ ನೆರವೇರಿತು. ಬೆಳಿಗ್ಗೆಯಿಂದ ರಾತ್ರಿಯವರೆಗೂ ಅಪಾರ ಭಕ್ತ ಸಮೂಹ ದೇವಸ್ಥಾನಕ್ಕೆ ಆಗಮಿಸಿ ಪೂಜೆ, ವ್ರತಾಚರಣೆ ಕೈಗೊಂಡು ದರ್ಶನ, ಪ್ರಸಾದ ಪಡೆದರು. ಆರ್‌ಎಸ್‌ಎಸ್ ಸ್ವಯಂಸೇವಕರು ಸೇವೆ ಸಲ್ಲಿಸಿದರು. ರಾತ್ರಿ 21 ಋತ್ವಿಜರು ವೇದ ಮಂತ್ರಘೋಷಗಳೊಂದಿಗೆ (ಯಾಮಪೂಜಾ) ಲಘು ರುದ್ರಾಭಿಷೇಕ, ಪಂಚಾಮೃತ ಅಭಿಷೇಕ, ರುದ್ರಾಭಿಷೇಕ, ಕ್ಷೀರಾಭಿಷೇಕ, ಮಹಾಮಂಗಳಾರತಿ ನೆರವೇರಿಸಿದರು. ಧಾರವಾಡದ ಜಿಲ್ಲಾಧಿಕಾರಿ ದಿವ್ಯ ಪ್ರಭು ಮತ್ತು ಗದಗ ಜಿಲ್ಲಾ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಮುದಕಮ್ಮನವರ ಕುಟುಂಬ ಸಮೇತ ಸೋಮೇಶ್ವರನ ದರ್ಶನ ಪಡೆದರು.



ಪಟ್ಟಣದ ಗೊಲ್ಲಾಳೇಶ್ವರ, ಸಹಸ್ರಲಿಂಗ, ಲಕ್ಷ್ಮೀಲಿಂಗೇಶ್ವರ ಸೇರಿ ಉಳಿದೆಲ್ಲ ಶಿವ ದೇವಸ್ಥಾನಗಳಲ್ಲಿ ವಿಶೇಷ ಪೂಜೆ, ಜಾಗರಣೆ ನೆರವೇರಿತು. ಹಬ್ಬದ ದಿನವೂ ಮಾರುಕಟ್ಟೆಯಲ್ಲಿ ಜನತೆ ಹೂವು-ಹಣ್ಣು ಸೇರಿ ಅಗತ್ಯ ವಸ್ತುಗಳ ಖರೀದಿಯಲ್ಲಿ ತೊಡಗಿದ್ದರು. ಒಂದಷ್ಟು ಹಣ್ಣುಗಳ ಬೆಲೆ ಹೆಚ್ಚಳವಾಗಿದ್ದರೆ ಮತ್ತೊಂದಿಷ್ಟು ಹಣ್ಣುಗಳ ಬೆಲೆ ಸಾಮಾನ್ಯವಾಗಿತ್ತು. ಕಲ್ಲಂಗಡಿ ಹಣ್ಣು 30 ರೂ ಕೆಜಿ, ಬಾಳೆಹಣ್ಣು ಡಜನ್-40-50, ಕರಬೂಜ್, ದ್ರಾಕ್ಷಿ ಮತ್ತು ಖರ್ಜೂರ ಕೆಜಿಗೆ-70-80ರಂತೆ ದರವಿತ್ತು. ಗುರುವಾರ ರಾತ್ರಿ ದೇವಸ್ಥಾನದಲ್ಲಿ ಸಂಗೀತ, ಭರತನಾಟ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ದತ್ತಿ ಉಪನ್ಯಾಸದಲ್ಲಿ ಎ.ವ್ಹಿ. ಕಾಳಪ್ಪನವರ

# ಉದ್ಯಮಗಳು ಬೆಳವಣಿಗೆಯತ್ತ ಸಾಗುತ್ತಿವೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೆ.ಎಸ್.ಎಫ್.ಸಿ.ಯಿಂದ ಸಾಲ ಸೌಲಭ್ಯಗಳನ್ನು ಪಡೆದುಕೊಂಡು ಸಾಕಷ್ಟು ಉದ್ದಿಮೆದಾರರು ಯಶಸ್ವಿ ಉದ್ಯಮಿಗಳಾಗಿದ್ದಾರೆ. ಕಾಲಕಾಲಕ್ಕೆ ತಕ್ಕಂತೆ ಬದಲಾವಣೆಗಳು ಆಗುತ್ತಿವೆ. ಹಿಂದಿನ ಕಾಲದಲ್ಲಿ ಸೈಕಲ್ ಮೇಲೆ ಅಡ್ಡಾಡಿ ಸಾಲ ವಸೂಲಿ ಮಾಡುತ್ತಿದ್ದರು. ಆದರೆ ಕಾಲ ಬದಲಾದಂತೆ ಉದ್ದಿಮೆದಾರರು ಜಾಗೃತಿ ಹೊಂದುವ ಮೂಲಕ ಸಾಲದ ಮರುಪಾವತಿಯನ್ನು ಸರಿಯಾಗಿ ಮಾಡುತ್ತಿದ್ದಾರೆ. ಕೇಂದ್ರ ಸರ್ಕಾರದಿಂದ ಸಾಕಷ್ಟು ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯಗಳು ದೊರೆಯುವದರಿಂದ ಉದ್ಯಮಗಳು ಬೆಳವಣಿಗೆಯತ್ತ ಸಾಗುತ್ತಿವೆ ಎಂದು ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಶಾಖಾ ವ್ಯವಸ್ಥಾಪಕ ಎ.ವ್ಹಿ. ಕಾಳಪ್ಪನವರ ಹೇಳಿದರು.



ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಲಿಂ. ಲಕ್ಷ್ಮಣರಾವ್ ಅನಂತ ಪೊತ್ನೀಸ, ಲಿಂ. ಶಿವಪ್ಪ ಮರಿತಮ್ಮಪ್ಪ ನಿಲೂಗಲ್, ಲಿಂ. ಗುಡ್ಡಪ್ಪ ಸಣ್ಣನಿಂಗಪ್ಪ ಹೆಗಡಿಕಟ್ಟಿ, ಲಿಂ. ವಿರುಪಾಕ್ಷಪ್ಪ ತೋಟಪ್ಪ ಪಟ್ಟಣಶೆಟ್ಟಿ, ದಿ. ಚಂದನಮಲ್ ಗುಲಾಬಚಂದ ಬಾಗಮಾರ ಇವರುಗಳ ಸ್ಮಾರಕ ದತ್ತಿ ಉಪನ್ಯಾಸದ ನಿಮಿತ್ತ ಕೈಗಾರಿಕೋದ್ಯಮಿಗಳಿಗೆ ಕೆ.ಎಸ್.ಎಫ್.ಸಿ.ಯಿಂದ ದೊರೆಯುವ ಸೌಲಭ್ಯಗಳ ಕುರಿತು ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂಡಸ್ಟ್ರಿಯಲ್ ಉಪ ಸಮಿತಿ ಚೇರಮನ್ ಮದುಸೂಧನ ಡಿ.ಪುಣೇಕರ ಸ್ವಾಗತಿಸಿದರು. ಪ್ರಾಸ್ತಾವಿಕ ಹಾಗೂ ಲಿಂಗೈಕ್ಯರಾದ ಮಹನೀಯರ ಪರಿಚಯವನ್ನು ದತ್ತಿ ಉಪನ್ಯಾಸ ಉಪಸಮಿತಿ ಚೇರಮನ್ ಚಂದ್ರು ಬಾಳಿಹಳ್ಳಿಮಠ ಮಾಡಿದರು. ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ. ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಸಂಸ್ಥೆಯ ಉಪಾಧ್ಯಕ್ಷ ವಿಜಯಕುಮಾರ ಎಸ್. ಮಾಟಲದಿನ್ನಿ ವಂದಿಸಿದರು. ವೇದಿಕೆಯಲ್ಲಿ ಕೆ.ಎಸ್.ಎಫ್.ಸಿ. ಸಹಾಯಕ ವ್ಯವಸ್ಥಾಕರಾದ ಎಮ್ .ಎ. ತಹಸೀಲ್ದಾರರನ್ನು ಸಂಸ್ಥೆಯಿಂದ ಸನ್ಮಾನಿಸಿ ಗೌರವಿಸಲಾಯಿತು. ಸಭೆಯಲ್ಲಿ ಸಂಸ್ಥೆಯ ಪದಾಧಿಕಾರಿಗಳು, ಮಾಜಿ ಅಧ್ಯಕ್ಷರು ಆಡಳಿತ ಮಂಡಳಿ ಸದಸ್ಯರು ಹಾಗೂ ಉದ್ದಿಮೆದಾರರು ಪಾಲ್ಗೊಂಡಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ತಿಳಿಸಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಮಾತನಾಡುತ್ತಾ, ಉದ್ಯಮಗಳನ್ನು ಪ್ರಾರಂಭಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರವು ಸಾಕಷ್ಟು ಹಣಕಾಸಿನ ಸೌಲಭ್ಯಗಳನ್ನು ಒದಗಿಸುತ್ತಿವೆ. ಅದರಂತೆ ಉದ್ಯಮಗಳು ಕೂಡಾ ದೇಶದ ಅಭಿವೃದ್ಧಿಗೆ ಕೈಜೋಡಿಸುತ್ತಿವೆ. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯು ಕಡಿಮೆ ಬಡ್ಡಿ ದರದಲ್ಲಿ ಸಾಲಭ್ಯಗಳನ್ನು ಒದಗಿಸುತ್ತಿವೆ. ಅದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

### ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ-1ರಲ್ಲಿ ಸರಸ್ವತಿ ಪೂಜೆ

## ತಂದೆ-ತಾಯಿ, ಗುರುವನ್ನು ಮರೆಯದಿರಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಹೆತ್ತು ಹೊತ್ತು, ಸಾಕಿ ಸಲುಹಿದ ತಂದೆ-ತಾಯಿಗಳನ್ನು ಹಾಗೂ ವಿದ್ಯೆ ಕಲಿಸಿದ ಗುರುಗಳನ್ನು, ಕಲಿತ ಶಾಲೆಯನ್ನು ಎಂದೂ ಮರೆಯದಿರಿ ಎಂದು ಶಿವಾನಂದ ದಳವೆ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ-1ರಲ್ಲಿ ಮಹಾ ಸರಸ್ವತಿ ಪೂಜೆ ಸಮಾರಂಭ, 7ನೇ ತರಗತಿ ಮಕ್ಕಳ ಬಿಳ್ಕೊಡುಗೆ ಸಮಾರಂಭ ಹಾಗೂ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕಣ್ಣಿಗೆ ಕಾಣುವ ನಿಜವಾದ ದೇವರು ತಂದೆ-ತಾಯಿ ಹಾಗೂ ಕಲಿಸಿದ ಗುರುಗಳು. ಪ್ರತಿ ಮಗುವಿನ ಶ್ರೇಯೋಭಿವೃದ್ಧಿಗಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟಿರುತ್ತಾರೆ. ಅಂತಹ ಮಹನೀಯರನ್ನು ಎಂದೆಂದಿಗೂ ಮರೆಯಬಾರದು. ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆಯ ಶಾಲಾ ಪ್ರಧಾನ ಗುರುಗಳು, ಸಹ ಶಿಕ್ಷಕರು ಹಾಗೂ ಎಸ್‌ಡಿಎಂಸಿ ಸರ್ವ ಸದಸ್ಯರ ಸಹಕಾರದಿಂದ ಈ ಶಾಲೆ ಮಾದರಿಯಾಗಿದ್ದು, ಈ ಶಾಲೆಯ ಅಭಿವೃದ್ಧಿಗಾಗಿ ಹಳೆಯ ವಿದ್ಯಾರ್ಥಿಗಳು ಇನ್ನಷ್ಟು ಸಹಕರಿಸಿದರೆ ಮತ್ತಷ್ಟು ಅಭಿವೃದ್ಧಿ ಪಥದಲ್ಲಿ ಸಾಗುತ್ತದೆ ಎಂದರು.

ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ, ತರಗತಿಯಲ್ಲಿ ಉತ್ತಮ ಅಂಕ ಪಡೆದ, ಕ್ರೀಡೆಯಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಹಾಗೂ ಶಾಲೆಗೆ ದೇಣಿಗೆ ನೀಡಿದ ದಾನಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ ವಹಿಸಿದ್ದರು. ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ, ಬಿಇಓ ವಿ.ವಿ. ನಡುವಿನಮನಿ, ವಿ.ಎಂ. ಹಿರೇಮಠ, ಎಸ್.ಆರ್. ಬಂಡಿ, ಪ.ಪಂ ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಎಂ. ಶೇಖ, ಎಸ್.ಸಿ. ಬಡ್ನಿ, ವಿಜಯ ನೀಲಗುಂದ, ರಾಮಣ್ಣಾ ಕಮಾಜಿ, ಸಂಜಯ ನೀಲಗುಂದ, ಚಂದ್ರು ತೆಂಬದಮನಿ, ಪ್ರಲ್ಹಾದ ಯಾವಗಲ್ಲ, ಬಿ.ಜಿ. ಯಳವತ್ತಿ, ಮಂಜುನಾಥ ಮಟ್ಟಿ ಎಸ್.ಸಿ. ಅಮರಶೆಟ್ರ, ಮಾರುತಿ ಜಾಧವ, ಎಂ.ಎಂ. ಮೇಗಲಮನಿ, ಬೋಜರಾಜ ಹಡಪದ, ಎಸ್‌ಡಿಎಂಸಿ ಸರ್ವ ಸದಸ್ಯರು ಭಾಗವಹಿಸಿದ್ದರು.

ಶಿಕ್ಷಕ ಮಂಜುನಾಥ ಮಟ್ಟಿ ಮಾತನಾಡಿ, ಸರಕಾರಿ ಶಾಲೆಗಳು ಎಂದೆಂದಿಗೂ ತಮ್ಮ ಅಸ್ತಿತ್ವವನ್ನು ಕಳೆದುಕೊಳ್ಳುವುದಿಲ್ಲ. ಪಾಲಕರು ಸರಕಾರಿ ಶಾಲೆಗಳಲ್ಲಿ ಮಕ್ಕಳನ್ನು ಸೇರಿಸಿದಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುವುದರ ಜೊತೆಗೆ ಉತ್ತಮ ಸಂಸ್ಕಾರ ಹೊಂದಲು ಸಹಕಾರಿಯಾಗುತ್ತದೆ ಎಂದರು.

### ನೀಲಗುಂದ ಗ್ರಾಮದ ಶಿವರಾತ್ರಿ ಉತ್ಸವ ಕಾರ್ಯಕ್ರಮದಲ್ಲಿ ಜಿಮ್ಸ್ ನಿರ್ದೇಶಕ ಡಾ. ಬೊಮ್ಮನಹಳ್ಳಿ

# ಮಕ್ಕಳ ಹುಚ್ಚು ಭಾವನೆಗೆ ಕಡಿವಾಣ ಹಾಕಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳ ಹುಚ್ಚು ಭಾವನೆಗೆ ಕಡಿವಾಣ ಹಾಕಬೇಕು. ದುಃಖ-ಸಂತೋಷದ ಬಗ್ಗೆ ಮಕ್ಕಳಿಗೆ ಹೇಳಿಕೊಡಬೇಕು ಎಂದು ಗದಗ ವೈದ್ಯಕೀಯ ವಿಜ್ಞಾನ ಕೇಂದ್ರದ ನಿರ್ದೇಶಕ ಡಾ. ಬಸವರಾಜ ಬೊಮ್ಮನಳ್ಳಿ ಅಭಿಪ್ರಾಯಪಟ್ಟರು.



ಸಮೀಪದ ನೀಲಗುಂದ ಗ್ರಾಮದ ಶಿವರಾತ್ರಿ ಉತ್ಸವ ಕಾರ್ಯಕ್ರಮದ ಅನುಭಾವ ಗೋಷ್ಠಿಯಲ್ಲಿ ಮುಖ್ಯ ಅಥಿತಿಯಾಗಿ ಭಾಗವಹಿಸಿ ಅವರಯ ಮಾತನಾಡಿ, ನಾವು ಮಲಗುವ ಮುನ್ನ ದಿನದ ಬಗ್ಗೆ ಒಮ್ಮೆ ಅವಲೋಕನ ಮಾಡಬೇಕು.

ಅಂದಾಗ ಮನಸ್ಸು ಶುದ್ಧವಾಗಿರುತ್ತದೆ. ಅರಿವು ಎಂಬುದನ್ನು ಕಲಿಸುವವನು ದೇವರು. ಸಣ್ಣ ಕಷ್ಟವನ್ನು ದೊಡ್ಡದು ಮಾಡುವವದು ಮನಸ್ಸು. ಅದನ್ನು ಹ ತೋಟಂಬಲ್ಲಿಡಲು ಪೂಜೆ ಮಾಡಬೇಕು. ಅಂ-ದಾಗ ಮಾತ್ರ ಮನಸ್ಸು ಶುದ್ಧವಾಗುತ್ತದೆ. ನಾವು ಮಾಡುವ ಊಟದ ಬಗ್ಗೆ ಗಮನವಿರಬೇಕು. ಆರೋಗ್ಯಕರ ಆಹಾರ ಸೇವಿಸಬೇಕು ಎಂದರು.

ಆಶೀರ್ವಚನ ನೀಡಿದ ಬನ್ನಿಕೊಪ್ಪದ ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ, ಇಂದು ಧಾರ್ಮಿಕ ಸಂಸ್ಕಾರ ಕಲಿಸಲು ಮಠ-ಮಾನ್ಯಗಳು ಬೇಕು. ಮನುಷ್ಯನಿಗೆ ಪುನರ್ಜನ್ಮ ತುಂಬುವ ಅಧಿಕಾರ ಗುರುಕುಲಕ್ಕಿದೆ. ತಪಸ್ಸಿನ ಶಕ್ತಿಯಿಂದ ಸಕಲ ರೋಗಗಳನ್ನು ಪರಿಹರಿಸುವ ಶಕ್ತಿಯಿದೆ. ಪ್ರತಿಯೊಬ್ಬರೂ ಸತ್ವಭರಿತ ಮಾತನ್ನಾಡಬೇಕು. ಸಂಸ್ಕಾರ, ಸದ್ವಿಚಾರಗಳು ಅರ್ಥಪೂರ್ಣ ಜೀವನ ನಡೆಸಲು ಅನುಕೂಲ ಎಂದರು.

ಗುದ್ನೇಶ್ವರ ಮಠದ ಪ್ರಭುಲಿಂಗದೇವರು ಮಾತನಾಡಿ, ಇಂದು ನಾವು ಪಿಜ್ಜಾ-ಬರ್ಗರ್‌ಗೆ ಮಾರು ಹೋಗಿದ್ದೇವೆ. ಉಚಿತ ಎನ್ನುವದು ಯಾವುದೂ ನಡೆಯುವದಿಲ್ಲ. ಅದು ತನ್ನ ಬೆಲೆ ಕಳೆದುಕೊಳ್ಳುತ್ತದೆ. ಕಾಯಕ ಮಾಡದೇ ಊಟ ಮಾಡುವ ಹಕ್ಕು ಯಾರಿಗೂ ಇಲ್ಲ ಎಂದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಗಣ್ಯರಾದ ಮಲ್ಲಿಕಾರ್ಜುನ ಸುರಕೋಡ, ರಾಮಣ್ಣ ಕಮಾಜಿ, ಯಲ್ಲಪ್ಪ ಅದರಗುಂಚಿ, ಚಿಂಚಲಿ ಗ್ರಾ.ಪಂ ಅಧ್ಯಕ್ಷೆ ಶಶಿಕಲಾ ಪೂಜಾರ, ಉಪಾಧ್ಯಕ್ಷೆ ಲಲಿತಾ ಕುರಹಟ್ಟಿ ಇತರರು ಇದ್ದರು.

ಉತ್ತಮ ಸಂಸ್ಕಾರ ಸಿಗುವದು ವಿದ್ಯಾಮಂದಿರಗಳಲ್ಲಿ. ಜೀವನ ನಶ್ವರವಾಗಿದ್ದು, ಸದ್ಗತಿಯತ್ತ ಒಯ್ಯಲು ಶಿವರಾತ್ರಿ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು. ಇದು ಮನಸ್ಸು ಜಾಗೃತಗೊಳಿಸುವ ಕಾರ್ಯಕ್ರಮ. ನಮ್ಮ ಜೀವಕ್ಕೆ ಗ್ಯಾರಂಟಿ ಇಲ್ಲ. ಅದನ್ನು ನಾವೇ ರಕ್ಷಣೆ ಮಾಡಿಕೊಳ್ಳಬೇಕು. ಅದಕ್ಕಾಗಿ ಪರಮಾತ್ಮನ ಧ್ಯಾನ ಮಾಡಬೇಕು ಎಂದು ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ನುಡಿದರು.

## ಸಕ್ಕರೆನಾಡಲ್ಲಿ ಗುಂಡಿನ ಸದ್ದು



■ವಿಜಯಸಾಕ್ಷಿ ಸುದ್ದಿ, ಮಂಡ್ಯ

ಹಲವು ಪ್ರಕರಣಗಳಲ್ಲಿ ಬೇಕಾಗಿದ್ದ ಆರೋಪಿ ಮೇಲೆ ಪೊಲೀಸರು ಫೈರಿಂಗ್ ಮಾಡಿದ ಘಟನೆ ಮಂಡ್ಯ ತಾಲೂಕಿನ ಬಿ.ಹೊಸೂರು ಗ್ರಾಮದ ಅರಣ್ಯ ಪ್ರದೇಶದಲ್ಲಿ ನಡೆದಿದೆ.

ಸುಭಾಷ್ ಅಲಿಯಾಸ ಸುಬ್ಬು ಮೇಲೆ ಫೈರಿಂಗ್ ಮಾಡಲಾಗಿದ್ದು, ಐದಕ್ಕೂ ಅಧಿಕ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಆರೋಪಿ ಕಾಲಿಗೆ ಗುಂಡು ಹೊಡೆದು ಬಂಧಿಸಲಾಗಿದೆ.

ಬಿ. ಹೊಸೂರು ಸಮೀಪ ಆತ ತಲೆಮರೆಸಿಕೊಂಡಿರುವ ಮಾಹಿತಿ ಗೊತ್ತಾಗಿ ಬಂಧನಕ್ಕೆ ಪೊಲೀಸರು ತೆರಳಿದ್ದಾರೆ. ಈ ವೇಳೆ ಪೊಲೀಸರ ಮೇಲೆಯೇ ಆರೋಪಿ ಹಲ್ಲೆ ಮಾಡಿ ಪರಾರಿಯಾಗಲು ಯತ್ನಿಸಿದ್ದಾನೆ ಎನ್ನಲಾಗಿದೆ. ಮಂಡ್ಯ ಪೂರ್ವ ಠಾಣೆಯ ಪಿಎಸ್‌ಐ ಶೇಷಾದ್ರಿ ಕುಮಾರ್ ಫೈರಿಂಗ್ ಮಾಡಿದ್ದಾರೆ. ಆತ್ಮ ರಕ್ಷಣೆಗಾಗಿ ಆರೋಪಿಯ ಕಾಲಿಗೆ ಗುಂಡು ಹೊಡೆದು ಬಂಧಿಸಲಾಗಿದೆ. ಗಾಯಾಳು ಆರೋಪಿಯನ್ನು ಬಂಧಿಸಿ ಮಂಡ್ಯದ ಮಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ.

## ಪೊಲೀಸ್ ಇಲಾಖೆಯಿಂದ ಕಂದಾಯ ಇಲಾಖೆವರೆಗೂ ಭ್ರಷ್ಟಾಚಾರ ವ್ಯಾಪಿಸಿದೆ: ಪ್ರಹ್ಲಾದ್ ಜೋಶಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಪೊಲೀಸ್ ಇಲಾಖೆಯಿಂದ ಕಂದಾಯ ಇಲಾಖೆವರೆಗೂ ಭ್ರಷ್ಟಾಚಾರ ವ್ಯಾಪಿಸಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದಲ್ಲಿ ಭ್ರಷ್ಟಾಚಾರ ಮಿತಿಮೀರಿದೆ. ಪೊಲೀಸ್ ಇಲಾಖೆಯಿಂದ ಕಂದಾಯ ಇಲಾಖೆವರೆಗೂ ಭ್ರಷ್ಟಾಚಾರ ವ್ಯಾಪಿಸಿದೆ. ಆರ್‌ಟಿಒ ವರ್ಗಾವಣೆಯಲ್ಲಿಯೂ ವ್ಯಾಪಕ ಭ್ರಷ್ಟಾಚಾರವಾಗಿದೆ. ಭ್ರಷ್ಟಾಚಾರದಿಂದ ಇವರ ಬಳಿ ಹಣವಿಲ್ಲ. ಆಡಳಿತ ನಡೆಸಲೂ ಆಗ್ತಿಲ್ಲ. ಮುಂದಾಲೋಚನೆ ಇಲ್ಲದೆ ಗ್ಯಾರಂಟಿ ಅನುಷ್ಠಾನಕ್ಕೆ ತಂದಿದೆ. ದೊಡ್ಡ ಪ್ರಮಾಣದ ವಿದ್ಯುತ್ ಕಡಿತವಾಗಿದೆ. ಗ್ಯಾರಂಟಿ ಯಾರಿಗೂ ಸಿಗದಂತೆ ಮಾಡ್ತಿದೆ ಎಂದು ಆರೋಪಿಸಿದ್ದಾರೆ.

* 'ಚಿತ್ರ ಧ್ಯಾನ ಮಾಡೋಣ ಬನ್ನಿರಿ' ವಿಶೇಷ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಪಿಎಸ್‌ಐ ನಾಗರಾಜ ಗಡಾದ

# ಕಣ್ಣಿಗೆ ಕಾಣದ ಚೇತನ ಶಿವ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬದುಕಿನಲ್ಲಿ ಅಜ್ಞಾನ ಹೋಗಲಾಡಿಸಿ ಸುಜ್ಞಾನದ ಬೆಳಕನ್ನು ಬೆಳಗಿಸು ಎಂದು ಶಿವನನ್ನು ಉಪವಾಸ, ಜಪ, ತಪ, ಪೂಜೆ, ಸ್ಮರಣೆ, ಭಜನೆಯ ಮೂಲಕ ಪ್ರಾರ್ಥಿಸುವ ಶುಭ ದಿನವೇ ಶಿವರಾತ್ರಿ ಎಂದು ಪಿಎಸ್‌ಐ ನಾಗರಾಜ ಗಡಾದ ಹೇಳಿದರು.

ಅವರು ಲಕ್ಷ್ಮೇಶ್ವರದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಮಹಾಶಿವರಾತ್ರಿಯ ಅಂಗವಾಗಿ ಹೆಸರಾಂತ ಕಲಾವಿದರು ಹಾಗೂ ಪುಲಿಗೆರೆಯ ಕಲಾ ಮನಸ್ಸುಗಳಿಂದ ಕ್ಯಾನ್ವಾಸ್‌ನಲ್ಲಿ ಶಿವ ಸ್ವರೂಪದ ಚಿತ್ರ ರಚನೆಯ ಮೂಲಕ 'ಚಿತ್ರ ಧ್ಯಾನ ಮಾಡೋಣ ಬನ್ನಿರಿ' ಎಂಬ ವಿಶೇಷ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಕಣ್ಣಿಗೆ ಕಾಣದ ಭಾವಕ್ಕೆ ಮೀರಿದ, ಆದಿ-ಅಂತ್ಯವಿಲ್ಲದ ನಿರಾಕಾರ ಸ್ವರೂಪದ ಚೇತನ ಶಕ್ತಿಯೇ ಶಿವ ಪರಮಾತ್ಮ. ಶಿವರಾತ್ರಿಯ ಶುಭ ಘಳಿಗೆಯಲ್ಲಿ ಶಿವನನ್ನು ನಮ್ಮದೇ ಆದ ಶ್ರೇಷ್ಠ ಕಾರ್ಯದ ಮೂಲಕ ಶ್ರದ್ಧೆ, ಭಕ್ತಿ, ತನ್ಮಯತೆಯಿಂದ ಧ್ಯಾನಿಸಿದರೆ ದೇಹ ಹಾಗೂ ಮನಸ್ಸಿಗೆ ಶಾಂತಿ, ನೆಮ್ಮದಿ ಪ್ರಾಪ್ತಿಯಾಗುತ್ತದೆ.



ಶಿವರಾತ್ರಿ ದಿನ ವಿಶೇಷವಾಗಿ ಶಿವ ಮಂದಿರಗಳಲ್ಲಿ ಪೂಜೆ, ಪ್ರಾರ್ಥನೆ, ಭಜನೆ, ಮಂತ್ರ, ಹೋಮ, ಯಾಗಗಳ ಮೂಲಕ ಅಂತರಾತ್ಮಕ್ಕೆ ಶಿವನ ಇರುವಿಕೆಯ ಅರಿವಾಗುವಂತೆ ಮಾಡುವ ಶಿವ ಧ್ಯಾನವನ್ನು ಶಿವನ ವಿವಿಧ ಸ್ವರೂಪದ ಚಿತ್ರ ಬಿಡಿಸುವ ಮೂಲಕ ಶಿವಧ್ಯಾನದ ಶ್ರೇಷ್ಠ ಕಾರ್ಯ ಮಾಡಿರುವುದು ಶ್ಲಾಘನೀಯ ಎಂದರು.

ದೇವಸ್ಥಾನಕ್ಕೆ ಆಗಮಿಸಿದ್ದ ಭಕ್ತರು ಕ್ಯಾನವಾಸ್‌ನಲ್ಲಿ ತಮ್ಮದೇ ಆದ ಶಿವಸ್ವರೂಪದ ಚಿತ್ರ ಬಿಡಿಸಿ, ಶಿವನ ಹೆಸರು ಬರೆದು ಧ್ಯಾನಿಸಿದ್ದು ಕಂಡುಬಂದಿತು.

ಈ ವೇಳೆ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ, ದೇವಸ್ಥಾನ ಕಮಿಟಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಮುಖ್ಯಾಧಿಕಾರಿ ಮಹೇಶ ಹೆಚ್, ಸದಸ್ಯರಾದ ಅಶ್ವಿನಿ ಅಂಕಲಕೋಟಿ, ಪ್ರವೀಣ ಬಾಳಿಕಾಯಿ, ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ, ಚನ್ನಪ್ಪ ಜಗಲಿ, ಸಿ.ಜಿ. ಹಿರೇಮಠ, ಮಾಲಾದೇವಿ ದಂದರಗಿ, ವಿರೂಪಾಕ್ಷ ಆದಿ, ಬಸವರಾಜ ಮೆಣಸಿನಕಾಯಿ, ನಾಗರಾಜ ಕಳಸಾಪುರ, ಎಸ್.ಎ. ಬೆಟಗೇರಿ, ಕಲಾವಿದರಾದ ರಾಜೇಶ ಉಮಚಗಿ, ಸಂತೋಷ ಕ್ಯಾದಿಗೇರಿ, ಗಂಗಾಧರ ಬಂಡಾನವರ, ಚೇತನ ಹತ್ತಿಕಾಳ, ಅರುಣ ತೊರಗಲ್, ಪ್ರಕಾಶ ಕುಂಬಾರ, ಅಶ್ವಿನಿ ಹಿರೇಮಠ, ಅಂಬಿಕಾ ಮಾದಾಪುರಮಠ, ಮಾಂತೇಶ ಕಾಶಿಕೋವಿ, ಶಿವು ಆರೇರ, ಶರಣು ಶಿವಸಿಂಪಗೇರ, ರಮೇಶ ಗಾರವಾಡ, ಅಭಿಷೇಕ ಕುಂಬಾರ, ಎಸ್.ಬಿ. ತೆಳಗಿನಮನಿ ಸೇರಿ ಹಲವರಿದ್ದರು.

ಲಜಾವರ್ ಆರ್ಟ್ ಫೌಂಡೇಶನ್‌ನ ಚಿತ್ರ ಕಲಾವಿದ/ಶಿಕ್ಷಕ ಪ್ರವೀಣ ಗಾಯಕರ ನೇತೃತ್ವದಲ್ಲಿ ನಡೆದ ಚಿತ್ರ ಧ್ಯಾನ ಕಾರ್ಯಕ್ರಮದಲ್ಲಿ ಕಲಾವಿದರ ಕುಂಚದಿಂದ ಭಗವಾನ್ ಶಿವ, ಈಶ್ವರ, ಸೋಮೇಶ್ವರ, ಶಿವಲಿಂಗ, ತ್ರಿಶೂಲ, ನಂದಿ, ಡಮರುಗ, ಶಿವ-ಪಾರ್ವತಿ, ಓಂ ನಮಃಶಿವಾಯ ಹೀಗೆ ಶಿವನ ವಿವಿಧ ರೂಪಗಳನ್ನು ಬಿಡಿಸುವ ಮೂಲಕ ಶಿವಧ್ಯಾನ ಮಾಡಿದರು.

## ಶಿವನಾಮ ಸ್ಮರಣೆಯಲ್ಲಿ ಮಿಂದೆದ್ದ ಭಕ್ತರು



■ವಿಜಯಸಾಕ್ಷಿ ಸುದ್ದಿ, ಡಂಬಳ

ಹೋಬಳಿಯ ಗ್ರಾಮಗಳಲ್ಲಿ ಶಿವರಾತ್ರಿ ನಿಮಿತ್ತ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಜರುಗಿತು. ಡಂಬಳ ಗ್ರಾಮದ ಜಗದ್ಗುರು ತೋಂಟದ ಮದರ್ಧನಾರೀಶ್ವರ ಮಠದಲ್ಲಿ, ಈಶ್ವರ ದೇವಸ್ಥಾನದಲ್ಲಿ, ನಕ್ಷತ್ರ ಆಕಾರದ ದೊಡ್ಡಬಸವೇಶ್ವರ(ಅಜ್ಜಮೇಶ್ವರ), ವಿರಭದ್ರೇಶ್ವರ, ಸೋಮೇಶ್ವರ, ಮೇವುಂಡಿ ಗ್ರಾಮದ ಶಿವನ ದೇವಾಲಯ, ಪೇಠಾ ಆಲೂರಿನ ಹಾಲೇಶ್ವರ ದೇವಾಸ್ಥಾನದಲ್ಲಿ ತ್ರಿವಿಧ ದಾಸೋಹಿ ಹಾಲೇಶ್ವರ ಶ್ರೀಗಳಿಂದ ವಿಶೇಷ ಪೂಜೆ ಜರುಗಿತು. ಹಬ್ಬದ ಪ್ರಯುಕ್ತ ಸಂಜೆ ವೇಳೆ ಮಹಿಳೆಯರು ವಿವಿಧ ದೇಗುಲಗಳಿಗೆ ತೆರಳಿ ಫಲಹಾರ, ನೈವೇದ್ಯ ಸಮರ್ಪಿಸಿದರು.

ಈಶ್ವರ ದೇಗುಲದಲ್ಲಿ ಶಿವರಾತ್ರಿ ಉಪವಾಸ ಹರಕೆ ಹೊತ್ತ ಭಕ್ತರು ಶಿವನಾಮ ಸ್ಮರಣೆ, ಭಜನೆ, ಶಿವನ ಸ್ತುತಿ, ಮಂತ್ರಗಳನ್ನು ಪಠಿಸಿ ಶಿವನನ್ನು ನೆನೆದು, ಭಕ್ತಿ ಸಮರ್ಪಿಸಿದರು.

## ಶಿವರಾತ್ರಿ ಅಂಗವಾಗಿ ಸ್ವಚ್ಛತಾ ಜಾಗೃತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಅಂಗವಾಗಿ ಹರಿಹರದ ಮಹಾತಪಸ್ವಿ ಸೇವಾ ಪ್ರತಿಷ್ಠಾನದ ಲಕ್ಷ್ಮೇಶ್ವರ ಶಾಖೆಯಿಂದ ಸ್ವಚ್ಛತಾ ಕಾರ್ಯಕ್ರಮ ಹಾಗೂ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ಮಹಾತಪಸ್ವಿ ಫೌಂಡೇಶನ್ ಹರಿಹರದ ನಿರ್ದೇಶಕಿ ಸಂಗೀತಾ ಧರ್ಮಾಯತ್ ಮಾತನಾಡಿ, ಪ್ರತಿಷ್ಠಾನದಿಂದ ಪೂಜ್ಯ ಗುರುರಾಜ ಗುರೂಜಿ ಅವರ ಮಾರ್ಗದರ್ಶನದಲ್ಲಿ ಅನೇಕ ಸಮಾಜಮುಖಿ ಕಾರ್ಯಗಳನ್ನು ಮಾಡಲಾಗುತ್ತಿದೆ. ಪ್ರತಿವರ್ಷ ಶಿವರಾತ್ರಿಯಂದು ಸಾಮಾಜಿಕ, ಧಾರ್ಮಿಕ, ಸಾಂಸ್ಕೃತಿಕ, ಶೈಕ್ಷಣಿಕ ಕಾರ್ಯಕ್ರಮ ಮಾಡಿಕೊಂಡು ಬರಲಾಗುತ್ತಿದೆ.



ಈ ಬಾರಿ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಸ್ವಚ್ಛತಾ ಅಭಿಯಾನ ಹಮ್ಮಿಕೊಂಡಿದ್ದು, ದೇವಸ್ಥಾನಕ್ಕೆ ಬರುವ ಭಕ್ತಾದಿಗಳಿಗೆ ಸ್ವಚ್ಛತೆ ಬಗ್ಗೆ ಅರಿವು ಮೂಡಿಸುವುದು ಕಾರ್ಯಕ್ರಮ ಉದ್ದೇಶವಾಗಿದೆ. ರಾಜ್ಯದಲ್ಲಿ ಅಲ್ಲದೆ ಹೊರರಾಜ್ಯಗಳಲ್ಲಿ ಮಹಾತಪಸ್ವಿ ಫೌಂಡೇಶನ್ ವತಿಯಿಂದ ಅನೇಕ ಕಾರ್ಯಕ್ರಮಗಳನ್ನು ಮಾಡಿಕೊಂಡು ಬಂದಿದೆ ಎಂದು ಹೇಳಿದರು.

ಈ ವೇಳೆ ವಿಜಯ ಹೊಳ್ಳಿಯವರಮಠ , ಬಸವರಾಜ ಹಡಪದ, ಕವಿತಾ ಹೊಳ್ಳಿಯವರಮಠ, ಲಾವಣ್ಯ ಬಿಂಕದಕಟ್ಟಿ, ಮಂಜುಳಾ ಮುಳಗುಂದ, ಲಾವಣ್ಯ ಬಿಂಕದಕಟ್ಟಿ, ವೀರೇಶ್ವರಯ್ಯ ಫಕ್ಕೀರಸ್ವಾಮಿಮಠ ಮುಂತಾದವರಿದ್ದರು.

ಕರ್ನಾಟಕದ ಪ್ರಾಣೋಪಾಸಕ ಆಲೂರು ವೆಂಕಟರಾವರ 61ನೇ ಪುಣ್ಯಸ್ಮರಣೆ ಕಾರ್ಯಕ್ರಮ

# ಆಲೂರರ ಕನ್ನಡದ ಕಾರ್ಯಗಳು ಪ್ರೇರಣೀಯ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕನ್ನಡದ ಮೂಲ ಕೃಷಿಕ ಆಲೂರು ವೆಂಕಟರಾವರ ಹೆಸರಿನ ಮಾತ್ರದಿಂದಲೇ ಪುಳಕಿತಗೊಂಡ ಆ ಕಾಲದ ವಿದ್ಯಾರ್ಥಿಗಳಾದ ನಾವು ಅವರನ್ನು ನೋಡಿರದಿದ್ದರೂ ಅವರ ಕನ್ನಡದ ಕಾರ್ಯಗಳಿಂದ ಪ್ರೇರಿತರಾಗಿ ಸಾಧನಕೇರಿಯಲ್ಲಿ ಸರಕ್ಯೂಲೇಟಿಂಗ್ ಲೈಬ್ರರಿ ಪರಾರಂಭಿಸಿ ಅಲ್ಲಿ ಕರ್ನಾಟಕ ಗತವೈಭವ, ಲೋಕಮಾನ್ಯ ತಿಲಕರ ಕನ್ನಡ ಗೀತಾ ರಹಸ್ಯ ಕನ್ನಡ ಅನುವಾದ ಹಾಗೂ ಇನ್ನಿತರ ಮಹತ್ವದ ಕನ್ನಡ ಕೃತಿಗಳನ್ನು ಸಂಗ್ರಹಿಸಿ ವಿತರಿಸಿದ್ದು ಇಂದಿಗೂ ನನ್ನ ನೆನಪಿನಲ್ಲಿದೆ ಎಂದು ಪ್ರೆಸ್ ಇನ್ಫಾರ್ಮೇಶನ್ ಬ್ಯೂರೊ ಭಾರತ ಸರ್ಕಾರದ ನಿವೃತ್ತ ಪ್ರಿನ್ಸಿಪಲ್ ಡಿ.ಜಿ. ಮನೀಶದೇಸಾಯಿ ಸ್ಮರಿಸಿಕೊಂಡರು.

ನಗರದ ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವರ 61ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಶೇಷ ಉಪನ್ಯಾಸಕರಾಗಿ ಆಗಮಿಸಿದ್ದ ಪ್ರಾಧ್ಯಾಪಕ, ಸಾಹಿತಿ, ಡಾ. ಜಿನದತ್ತ ಹಡಗಲಿಯವರು ಮಾತನಾಡಿ, ಒಂದು ಕಾಲಕ್ಕೆ ವೈಭವಯುತ ಸಾಮ್ರಾಜ್ಯವೆಂದೇ ಗುರುತಿಸಿಕೊಂಡಿದ್ದ ವಿಜಯನಗರದ ಹಂಪಿಯ ಭಗ್ನಾವಶೇಷಗಳು, ಪಳೆಯುಳಿಕೆಗಳು ತಮ್ಮ ಹೃದಯವನ್ನು ಕಲಕಿ ಬಿಟ್ಟಾಗ ತೀವ್ರ ಹತಾಶೆಯನ್ನನುಭವಿಸಿದ ಆಲೂರರು ಆ ದಿನವನ್ನು ತಮ್ಮ ಜೀವನದಲ್ಲಿ ಕ್ರಾಂತಿ ಮಾಡಿದ ದಿನವೆಂದೇ ಭಾವಿಸುತ್ತಾರೆ ಎಂದು ಆಲೂರರ ಸಾಧನೆಗಳನ್ನು ಸ್ಮರಿಸಿಕೊಂಡರು.



ಟ್ರಸ್ಟ್ ಅಧ್ಯಕ್ಷ ಡಾ. ಪ್ರಮೋದಗಾಯಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಗೀತಾ ಆಲೂರ ಪ್ರಾರ್ಥಿಸಿದರು, ಸದಸ್ಯ ಕಾರ್ಯದರ್ಶಿ ಕುಮಾರ ಬೆಕ್ಕೇರಿ ಸ್ವಾಗತಿಸಿದರು. ಡಾ. ದೀಪಕ ಆಲೂರ ಕಾರ್ಯಕ್ರಮ ನಿರೂಪಿಸಿದರು, ಶ್ರೀನಿವಾಸ ವಾಡಪ್ಪಿ ವಂದಿಸಿದರು.

ಡಾ. ಎಚ್.ವ್ಹಿಕಾಖಂಡಕಿ, ಕವಿ ನರಸಿಂಹ ಪರಾಂಜಪೆ, ಎಸ್.ಎಮ್. ದೇಶಪಾಂಡೆ, ಎಮ್.ಎಮ್. ಚಿಕ್ಕಮಠ, ರಮೇಶ ಪರ್ವತಿಕರ, ಅನಿಲ ಕಾಖಂಡಕಿ, ಮುರಳಿ ಹುಯಿಲಗೊಳ, ಭಾರತಿದೇಸಾಯಿ, ಶ್ರೀಕಾಂತ ದೇಸಾಯಿ ಮುಂತಾದವರು ಉಪಸ್ಥಿತರಿದ್ದರು.

ವಿಜಯನಗರದ ಪುನರುತ್ಥಾನ, ಕನ್ನಡ ಕರ್ನಾಟಕತ್ವ, ಕರ್ನಾಟಕ ಏಕೀಕರಣಗಳ ಹೊಸ ಹೊಳವುಗಳನ್ನು ಕಂಡು ಅವುಗಳ ಸಾಕ್ಷಾತ್ಕಾರವಾಗಿ ಪಣತೊಡುತ್ತಾರೆ. ವಂಗಭಂಗ ಚಳುವಳಿಯ ಕಾವು ಇವರನ್ನು ತಟ್ಟಿ ಮತ್ತಷ್ಟು ದುಃಖವಾಗಿ ನಿಸ್ವಾರ್ಥ ಭಾವನೆಯಿಂದ ಈ ನಾಡು ನನ್ನ ಮನೆ, ಈ ದೇಶ ನನ್ನ ಕುಟುಂಬವೆಂಬ ಸೂತ್ರವನ್ನು ಮೂಲವಾಗಿಸಿಕೊಂಡು ತಮ್ಮ ಹೊರಾಟಕ್ಕೆ ಶ್ರೀಕಾರ ಹಾಕುತ್ತಾರೆ ಎಂದು ಡಾ. ಜಿನದತ್ತ ಹಡಗಲಿ ಹೇಳಿದರು.

## ಈಶ್ವರೀಯ ವಿ.ವಿಯಲ್ಲಿ ಶಿವರಾತ್ರಿ ಮಹೋತ್ಸವ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಈಶ್ವರೀಯ ವಿಶ್ವವಿದ್ಯಾಲಯ ಸೇವಾ ಕೇಂದ್ರದಿಂದ ಫೆ.28ರಂದು ಬೆಳಿಗ್ಗೆ 8 ಗಂಟೆಗೆ ಶಿವ ಧ್ವಜಾರೋಹಣ, ಮಧ್ಯಾಹ್ನ 3 ಗಂಟೆಗೆ ಕುಂಭಮೇಳ ಹಾಗೂ 21 ಶಿವಲಿಂಗಗಳ ಮೆರವಣಿಗೆಯು ರೇಣುಕಾ ಯಲ್ಲಮ್ಮಾ ದೇವಸ್ಥಾನದಿಂದ ಊರಿನ ಪ್ರಮುಖ ಬೀದಿಗಳಲ್ಲಿ ಸಾಗಿ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠಕ್ಕೆ ತಲುಪುವುದು. ಸಾಯಂಕಾಲ 6.30ಕ್ಕೆ ಮಾಹಾಶಿವರಾತ್ರಿ ಮಹೋತ್ಸವದ ಸಾನ್ನಿಧ್ಯವನ್ನು ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದ ಮಲ್ಲಿಕಾರ್ಜುನ ಮಾಹಾಸ್ವಾಮಿಗಳು ವಹಿಸಿಕೊಳ್ಳುವರು.

ಗದಗ ಅಡವೀಂದ್ರಸ್ವಾಮಿಮಠದ ಮಹೇಶ್ವರಸ್ವಾಮಿಗಳು ಸಮ್ಮುಖವನ್ನು ವಹಿಸಿಕೊಳ್ಳುವರು. ನೇತೃತ್ವವನ್ನು ಬ್ರಹ್ಮಕುಮಾರಿ ಶಿವಾನಿಯವರು, ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸುವರು. ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಕೃಷ್ಣಗೌಡ ಪಾಟೀಲ್, ಎಸ್.ಸಿ. ಬಡ್ನಿ, ಡಾ. ಎಸ್.ಸಿ. ಚವಡಿ, ಗೌರಮ್ಮಾ ಬಡ್ನಿ, ಹರ್ಷಲತಾ ದೇಶಪಾಂಡೆ, ದ್ಯಾಮಣ್ಣಾ ನೀಲಗುಂದ, ಕೆ.ಎಲ್. ಕರಿಗೌಡ್ರ, ವಿಜಯ ನೀಲಗುಂದ, ಅಶೋಕ ಸೋನಗೋಜಿ, ರಾಮಣ್ಣಾ ಕಮಾಜಿ, ಸಿದ್ದಲಿಂಗೇಶ ಕುರ್ತಕೋಟಿ, ಬಸವರಾಜ ಬಾತಾಖಾನಿ, ಮಾಹಾಂತೇಶ ಕೋರಿ, ದೇವರಾಜ ಸಂಗನಪೇಟಿ, ರಾಜಯೋಗಿನಿ ಬ್ರಹ್ಮಕುಮಾರಿ ನಾಗಲಾಂಬಿಕೆ ಭಾಗವಹಿಸುವರು ಜರಗುವವು ಎಂದು ಯೋಗ ಶಿಕ್ಷಕ ಪ್ರಕಾಶ ಮದ್ದಿನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷ್ಣಾ ಪರಾಪೂರ ನಗರಸಭೆ ಅಧ್ಯಕ್ಷರಾಗಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಕಷ್ಟದಲ್ಲಿದ್ದವರಿಗೆ ಸಹಾಯ ಹಸ್ತ ಚಾಚುತ್ತ ವಿವಿಧ ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಜನತೆಯಲ್ಲಿ ಅಚ್ಚಳಿಯದೇ 16ನೇ ವಾರ್ಡಿನ ನಗರಸಭೆ ಸದಸ್ಯ ಕೃಷ್ಣಾ ಪರಾಪೂರ ಉಳಿದಿದ್ದಾರೆ. ಇಂತಹ ನಾಯಕರು ನಗರಸಭೆಯ ಅಧ್ಯಕ್ಷರಾಗಲಿ ಎಂದು ಯುವ ಮುಖಂಡ ವಿನಾಯಕ ಪರಾಪೂರ ಆಗ್ರಹಿಸಿದರು.

ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಜನತೆಯ ಅಪೇಕ್ಷೆ ಮೇರೆಗೆ ತಮ್ಮ ನಿಸ್ವಾರ್ಥ ಸೇವೆಯಿಂದಲೇ 2002ರಲ್ಲಿ ಪಕ್ಷೇತರರಾಗಿ ಕಣಕ್ಕೆ ಇಳಿಯುವ ಮೂಲಕ ರಾಜಕೀಯಕ್ಕೆ ಕಾಲಿಟ್ಟರು. ಅಂದು ಪ್ರಬಲವಾಗಿದ್ದ ಕಾಂಗ್ರೆಸ್ ಹಾಗೂ ಜೆಡಿಎಸ್ ಅಭ್ಯರ್ಥಿಗಳನ್ನು ಹಿಮ್ಮೆಟ್ಟಿಸಿ ನಗರಸಭೆಗೆ ಆಯ್ಕೆಯಾದರು. ನಂತರ ಡಿ.ಆರ್. ಪಾಟೀಲ್ ಹಾಗೂ ಎಚ್.ಕೆ. ಪಾಟೀಲರ ಸಮ್ಮುಖದಲ್ಲಿ ಅಧಿಕೃತವಾಗಿ ಕಾಂಗ್ರೆಸ್ ಸೇರ್ಪಡೆಗೊಂಡು ಪಕ್ಷದ ಚಟುವಟಿಕೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ.

ಎಪಿಎಂಸಿ ಸದಸ್ಯರಾಗಿ ಸೇವೆ ಸಲ್ಲಿಸಿ, ತಾನೊಬ್ಬ ರೈತಪರ ನಾಯಕ ಎನ್ನುವುದನ್ನು ಸಾಬೀತುಪಡಿಸಿದ್ದಾರೆ. ಇವರ ಈ ಎಲ್ಲ ಯಶಸ್ಸಿನ ಹಿಂದೆ ಡಿ.ಆರ್. ಪಾಟೀಲ ಮತ್ತು ಎಚ್.ಕೆ. ಪಾಟೀಲರು ಇದ್ದಾರೆ ಎನ್ನುವುದನ್ನು ಅಲ್ಲಗಳೆಯುವಂತಿಲ್ಲ ಎಂದಿದ್ದಾರೆ.

ದಿವ್ಯ ಚೇತನ ಆಂಗ್ಲ ಮಾಧ್ಯಮ ಶಾಲೆಯ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ

# ವಿದ್ಯಾರ್ಥಿಗಳಿಗೆ ಸಮಯ ಪ್ರಜ್ಞೆ ಮುಖ್ಯ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿದ್ಯಾರ್ಥಿಗಳ ಜೀವನದಲ್ಲಿ ಸಮಯಪ್ರಜ್ಞೆ ಬಹಳ ಮುಖ್ಯವಾಗುತ್ತದೆ ಎಂದು ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ನೀಲಗುಂದ ಗುದ್ನೇಶ್ವರಮಠದಲ್ಲಿ ದಿವ್ಯ ಚೇತನ ಆಂಗ್ಲ ಮಾಧ್ಯಮ ಶಾಲೆಯ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಆಧುನಿಕ ತಂತ್ರಜ್ಞಾನದ ಈ ಯುಗದಲ್ಲಿ ಶಿಕ್ಷಣವೇ ನಮ್ಮನ್ನು ಆಳುತ್ತದೆ. ಉತ್ತಮ ಶಿಕ್ಷಣವನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು. ವಿದ್ಯಾರ್ಥಿ ಜೀವನದಲ್ಲಿ ಸಮಯ ಪ್ರಜ್ಞೆ, ಸತತ ಪ್ರಯತ್ನ, ಗುರಿ, ಛಲ ಹೊಂದಿದಾಗ ವಿದ್ಯಾರ್ಥಿ ಜೀವನ ಬಂಗಾರವಾಗುತ್ತದೆ. ವಿದ್ಯಾರ್ಥಿಗಳಾದವರು ಅತಿಯಾಗಿ ಮೊಬೈಲ್ ಬಳಿಕೆ ಮಾಡುತ್ತಿರುವುದರಿಂದ ಸಮಯ ಪ್ರಜ್ಞೆ ಮರೆತು ಇಂದು ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿರುವುದು ಸಾಕಷ್ಟು ವರದಿಗಳಲ್ಲಿ ಕಂಡು ಬಂದಿದೆ. ಮೊಬೈಲ್ ಬಳಕೆ ಕಡಿಮೆ ಮಾಡುವುದು ಒಳಿತು ಎಂದರು.



ಗದಗ ಗ್ರಾಮೀಣ ಬಿಇಓ ವಿ.ವಿ. ನಡುವಿನಮನಿ ಮಾತನಾಡಿ, ಇಂದು ನಮ್ಮ ಮಕ್ಕಳು ಹಾಗೂ ಪಾಲಕರು ಅಂಕಗಳ ಕಡೆ ಹೆಚ್ಚು ಗಮನ ನೀಡುತ್ತಿದ್ದಾರೆ. ಪಠ್ಯದ ಹೊರತು ಅದಕ್ಕೆ ಪೂರಕವಾದ ಜ್ಞಾನ ಮಕ್ಕಳಲ್ಲಿ ಸಾಕಷ್ಟು ಕಂಡು ಬರುತ್ತಿದ್ದು, ಅವರ ಅಭಿರುಚಿಗೆ ತಕ್ಕಂತೆ ಶಿಕ್ಷಣ ನೀಡುವುದರಿಂದ ಮಕ್ಕಳ ಕಲಿಕೆಗೆ ಸಹಕಾರಿಯಾಗುತ್ತದೆ. ಮಕ್ಕಳು ಕಲಿಕೆಯ ಜೊತೆಯಲ್ಲಿ ಸಂಸ್ಕಾರ ಕಲಿತಲ್ಲಿ ಬದುಕು ಹಸನಾಗುತ್ತದೆ ಎಂದರು.

ಎಸ್.ವಾಯ್. ಚಿಕ್ಕಟ್ಟಿ ಮಾತನಾಡಿ, ನಾವೆಲ್ಲರೂ ಶಿವನ ಮಕ್ಕಳು. ಶಿವರಾತ್ರಿ ಉತ್ಸವ ಈ ಭಾಗದಲ್ಲಿ ಅದ್ದೂರಿಯಾಗಿ ಜರಗುವುದರ ಜೊತೆಯಲ್ಲಿ ಉತ್ತಮ ಶಿಕ್ಷಣ ಸಂಸ್ಥೆ ತೆರೆಯುವ ಮೂಲಕ ಗ್ರಾಮೀಣ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುತ್ತಾ ಮಕ್ಕಳಿಗೆ ಜ್ಞಾನ ದಾಸೋಹ ನೀಡಿ ಮಕ್ಕಳನ್ನು ಸುಸಂಸ್ಕೃತರನ್ನಾಗಿ ಮಾಡುತ್ತಿರುವ ಪ್ರಭುಲಿಂಗ ದೇವರ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದರು

ದಿವ್ಯ ಚೇತನ ಆಂಗ್ಲ ಮಾದ್ಯಮ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರಗಿದವು. ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಸಾನ್ನಿಧ್ಯ ವಹಿಸಿದ್ದರು.

ವಿನಯ ಚಿಕ್ಕಟ್ಟಿ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಎಸ್.ವಾಯ್. ಚಿಕ್ಕಟ್ಟಿ, ಬಿ.ಡಿ. ಪಲ್ಲೇದ, ಶರಣು ರೆಡ್ಡೇರ, ಸಂಜಯ ನೀಲಗುಂದ, ಶಿವಬಸವ ಹಸಬಿ, ಗುರುಶಾಂತ ಮಟ್ಟಿ ಇದ್ದರು.

## ಜೆಡಿಎಸ್ ಕಾರ್ಯಕರ್ತರಿಂದ ಹಣ್ಣು-ಹಂಪಲ ವಿತರಣೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬುಧವಾರ ಶಿರಹಟ್ಟಿ ಪಟ್ಟಣದಲ್ಲಿ ಶಿವರಾತ್ರಿ ಪ್ರಯುಕ್ತ ಜೆಡಿಎಸ್ ಶಿರಹಟ್ಟಿ ಘಟಕದ ವತಿಯಿಂದ ಪಟ್ಟಣದಲ್ಲಿ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದವರು ಹಮ್ಮಿಕೊಂಡಿದ್ದ ಶಿವಲಿಂಗ ರ್‍ಯಾಲಿಯಲ್ಲಿ ಪಾಲ್ಗೊಂಡಿದ್ದ ಬ್ರಹ್ಮಕುಮಾರಿಯರಿಗೆ ಹಾಗೂ ಕಾರ್ಯಕರ್ತೆಯರಿಗೆ ಹಣ್ಣು-ಹಂಪಲ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಎಂ.ವೈ. ಮೊಧೋಳ, ಸಿದ್ದಣ್ಣ ಹೊಂಬಾಳಿಮಠ, ನಗರ ಘಟಕದ ಅಧ್ಯಕ್ಷ ರಾಯಸಾಬ ಢಾಲಾಯತ, ಪಕ್ಕಣ್ಣ ತುಳಿ, ಲಲಿತಾ ಕಲ್ಲಪ್ಪನವರ, ಎಂ.ಎಚ್. ಕನಕವಾಡ, ಶರಣಪ್ಪ ಹೂಗಾರ, ವಿನಾಯಕ ಪರಬತ, ವಿರೇಶ ಬಣಗಾರ, ಮಾಬುಸಾಬ ಢಾಲಾಯತ, ಶಿವು ಪಾಟೀಲ, ದೇವಪ್ಪ ವರವಿ, ಇಸಾಕ್ ಬೈರಕದಾರ, ಬಸು ಕಲ್ಲಪ್ಪನವರ, ಶಿವು ದಳವಿ ಮುಂತಾದವರು ಉಪಸ್ಥಿತರಿದ್ದರು.

ಶಿರಹಟ್ಟಿ ಪಟ್ಟಣವೂ ಸೇರಿದಂತೆ ವಿವಿಧ ಗ್ರಾಮೀಣ ಪ್ರದೇಶಗಳಲ್ಲಿ ಶಿವ ದೇವಾಲಯಗಳಲ್ಲಿ ಬೆಳಿಗ್ಗೆಯಿಂದಲೇ ರುದ್ರಾಭಿಷೇಕ ಸೇರಿದಂತೆ ವಿವಿಧ ಪೂಜೆ-ಪುನಸ್ಕಾರಗಳು ನಡೆದವು. ವಿಶೇಷವಾಗಿ ಶಿರಹಟ್ಟಿಯ ಕರ್ತೃ ಶ್ರೀ ಜ.ಫಕೀರೇಶ್ವರ ಸಂಸ್ಥಾನ ಮಠ, ಶಂಕರ ಮಹದೇವ ದೇವಸ್ಥಾ, ಬೆಳ್ಳಟ್ಟಿಯ ಶ್ರೀ ರಾಮಲಿಂಗೇಶ್ವರ ದಾಸೋಹ ಮಠ, ವರವಿಯ ಶ್ರೀ ಮೌನೇಶ್ವರ ಮಠ, ಬನ್ನಿಕೊಪ್ಪದ ಬ್ರಹನ್ಮಠ ಸೇರಿದಂತೆ ಹಲವು ಕಡೆಗಳಲ್ಲಿ ಭಕ್ತರು ಪೂಜೆಯಲ್ಲಿ ಪಾಲ್ಗೊಂಡಿದ್ದರು.

### ಶ್ರೀ ಸಂತ ಸೇವಾಲಾಲರ 286ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

# ಅನಿಷ್ಟಗಳನ್ನು ನಿವಾರಿಸುವಲ್ಲಿ ಪಣತೊಟ್ಟ ಮಹಾವೀರ

■ವಿಜಯಸಾಕ್ಷಿ ಸುದ್ದಿ, ಗದಗ

ಸಂತ ಸೇವಾಲಾಲರು ಸಮಾಜದಲ್ಲಿನ ಅನಿಷ್ಟಗಳನ್ನು ನಿವಾರಿಸುವಲ್ಲಿ ಪಣತೊಟ್ಟ ಮಹಾವೀರರು ಎಂದು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಮಂಗಳವಾರ ಜರುಗಿದ ಶ್ರೀ ಸಂತ ಸೇವಾಲಾಲರ 286ನೇ ಜಯಂತ್ಯುತ್ಸವದಲ್ಲಿ ಪಾಲ್ಗೊಂಡು ಭೋಗ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಸೇವಾವಾಲರು ಸರ್ವಧರ್ಮದ ಆರಾಧ್ಯ ದೈವ. ಎಲ್ಲರೂ ಸಂಘಟಿತರಾಗಿ ಅರಣ್ಯ ಭೂಮಿಗೆ ಸಂಬಂಧಿಸಿದ ಸಮಸ್ಯೆಗಳ ಪರಿಹಾರಕ್ಕಾಗಿ ಸಭೆ ಕರೆದು ಚರ್ಚಿಸಲಾಗುತ್ತದೆ ಎಂದು ತಿಳಿಸಿದರಲ್ಲದೆ, ಸೇವಾಲಾಲ ವೃತ್ತವನ್ನು ಅಭಿವೃದ್ಧಿಗೊಳಿಸಲು ಆಯುಕ್ತರಿಗೆ ಸೂಚಿಸಿದರು.

ಅಂಬೇಡ್ಕರ್ ಮೂರ್ತಿಗೆ ಮಾಲಾರ್ಪಣೆ ಮಾಡಿದ ತರುವಾಯ ಸೇವಾಲಾಲ ಮಹಾರಾಜರ ಭಾವಚಿತ್ರದ ರಥವು ನಗರದ ಗಾಂಧಿ ವೃತ್ತದಿಂದ ಪ್ರಾರಂಭವಾಗಿ ವಿವಿಧ ವೃತ್ತಗಳಲ್ಲಿ ಸಂಚರಿಸಿ ಡಾ. ಬಿ.ಆರ್. ಅಂಬೇಡ್ಕರ್ ಭವನಕ್ಕೆ ಬಂದು ತಲುಪಿದರು.

ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಮಾಜಿ ಸಚಿವ, ಹಾಲಿ ನರಗುಂದ ಶಾಸಕ ಸಿ.ಸಿ. ಪಾಟೀಲ ಚಾಲನೆ ನೀಡಿ ಮಾತನಾಡಿ, ಸಮಾಜದವರು ಸಂಘಟಿತರಾಗಬೇಕು. ನೆರೆ ರಾಜ್ಯಕ್ಕೆ ಗುಳೆ ಹೋದ ಕುಟುಂಬದವರ ಮಕ್ಕಳ ಶಿಕ್ಷಣಕ್ಕಾಗಿ ಪ್ರತ್ಯೇಕವಾಗಿ ವಿಶೇಷ ವಸತಿ ಶಾಲೆ ಪ್ರಾರಂಭಿಸಲಾಗುವುದು ಎಂದು ಭರವಸೆ ನೀಡಿದರು. ಮುಖ್ಯ ಅತಿಥಿಗಳಾಗಿ



ಪಾಲ್ಗೊಂಡಿದ್ದ ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಸಮಾಜವು ಉತ್ತಮ ಶಿಕ್ಷಣ ಪಡೆದು ದೇಶದಲ್ಲಿರುವ ಉನ್ನತ ಹುದ್ದೆಯನ್ನು ಅಲಂಕರಿಸಬೇಕು. ಶಿಕ್ಷಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಗಳಿಗೆ ಸದಾ ಸ್ಪಂದಿಸುವುದಾಗಿ ಹೇಳಿದರು. ವೇದಿಕೆಯಲ್ಲಿ ಜರುಗಿದ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಲಿಂಗಸ್ಗೂರಿನ ವಿಜಯ ಮಹಾಂತೇಶ್ವರಮಠದ ಸಿದ್ದಲಿಂಗ ಮಹಾಸ್ವಾಮಿಗಳು ಹಾಗೂ ಕೃಷ್ಣಾಪುರದ ಗವಿಮಠ ಆದ್ರಹಳ್ಳಿ ಬಂಜಾರ ಗುರುಪೀಠದ ಡಾ. ಕುಮಾರ ಮಹಾರಾಜರು ದಿವ್ಯ ಸಾನ್ನಿಧ್ಯ ವಹಿಸಿ ಹೋಮಾ ಸಲ್ಲಿಸುವ ಮೂಲಕ ವೇದಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಂದು ಈ.ನಾಯಕ ವಹಿಸಿದ್ದರು. ಕಾರ್ಯಕ್ರಮದಲ್ಲಿ ಶಿರಹಟ್ಟಿ ಮತಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ರಾಮಣ್ಣ ಲಮಾಣಿ, ಮುಖಂಡ ಆನಂದ ಗಡ್ಡದೇವರಮಠ, ನಗರಸಭೆ ವಿರೋದ ಪಕ್ಷದ ನಾಯಕ ಎಲ್.ಡಿ. ಚಂದಾವರಿ, ನಗರಸಭೆ ಸದಸ್ಯೆ ವಿದ್ಯಾವತಿ ಗಡಗಿ, ವಿವಿಧ ತಾಂಡಾಗಳ ನಾಯಕರಾದ ಡಿ.ಎಲ್. ನಾಯಕ, ಶಿವಪುತ್ರಪ್ಪ ನಾಯಕ, ಶಿವಪ್ಪ ನಾಯಕ, ರಾಮಪ್ಪ ನಾಯಕ, ಮಿಟ್ಟಪ್ಪ ನಾಯಕ, ರಾಜು ನಾಯಕ, ಪಾಂಡಪ್ಪ ನಾಯಕ, ಖಿಮಪ್ಪ ನಾಯಕ, ನೂರಪ್ಪ ನಾಯಕ, ಕುಬೇರ ನಾಯಕ, ಟೀಕು ನಾಯಕ, ಶ್ರೀನಿವಾಸ ನಾಯಕ, ತೇಜಪ್ಪ ನಾಯಕ ಹಾಗೂ ಕೆ.ಸಿ. ನಭಾಪೂರ, ಐ.ಎಸ್. ಪೂಜಾರ, ಚಂದ್ರಕಾಂತ ಚವ್ಹಾಣ, ಸೋಮು ಲಮಾಣಿ, ಪಾಂಡು ಚವ್ಹಾಣ, ನೀಲು ರಾಠೋಡ, ಟಿ.ಡಿ. ಪೂಜಾರ, ವಿಠ್ಠಲ್ ತೋಟದ್, ಡಾ. ವೆಂಕಟೇಶ ರಾಠೋಡ, ಗಣೇಶ ಲಮಾಣಿ, ಪರಮೇಶ ನಾಯಕ, ಅನಿಲ ಕಾರಭಾರಿ, ಹಾಮಜಪ್ಪ ಬಡಿಗೇರ, ಕುಭೇರಪ್ಪ ಪವಾರ, ತುಕಾರಾಮ ಲಮಾಣಿ, ತುಕಾರಾಮ ನಾಯಕ, ಲೋಕೇಶ ಕಟ್ಟಿಮನಿ, ಶೀವು ಅರಕಸಾಲಿ, ಸುಭಾಶ ಗುಡಿಮನಿ, ಕುಭೇರಪ್ಪ ರಾಠೋಡ, ದಯಾನಂದ ಪವಾರ, ಭೀಮಸಿಂಗ್ ರಾಠೋಡ ಹಾಗೂ ಸಮಾಜದ ಗಣ್ಯರು ಹಾಜರಿದ್ದರು.

ವಕೀಲರಾದ ರವಿಕಾಂತ ಅಂಗಡಿ ಮಾತನಾಡಿ, ಜಿಲ್ಲೆಯಲ್ಲಿ ಬಂಜಾರ ಸಮುದಾಯಕ್ಕೆ ಸ್ವಂತ ಸಮುದಾಯ ಭವನದ ಅವಶ್ಯಕತೆ ಇದೆ. ಬಗರಹುಕುಂ ಸಾಗುವಳಿ ಜಮೀನು, ಅರಣ್ಯ ಭೂಮಿ ಉಳುಮೆದಾರರಿಗೆ ಹಕ್ಕುಪತ್ರಗಳನ್ನು ನೀಡಬೇಕು. ಶಿಕ್ಷಣಕ್ಕೆ ಒತ್ತು ನೀಡುವ ಮೂಲಕ ಸರ್ಕಾರ ಯೋಜನೆಗಳನ್ನು ರುಪಿಸಬೇಕು ಹಾಗೂ ನಮ್ಮ ಸಮಾಜ ಜಾಗೃತರಾಗಿ ಸರ್ಕಾರದಿಂದ ಒದಗಿಸುವ ಸವಲತ್ತುಗಳನ್ನು ಪಡೇಯಬೇಕು ಎಂದು ಹೇಳಿದರು.



## ಮೇಕೆದಾಟು ಯೋಜನೆ; ಕೇಂದ್ರ ಸರ್ಕಾರ ಬೇಗ ನಿಲುವು ಪ್ರಕಟಿಸಲಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮೇಕೆದಾಟು ಯೋಜನೆ ಬಗ್ಗೆ ಕೇಂದ್ರ ಸರ್ಕಾರ ಬೇಗ ನಿಲುವು ಪ್ರಕಟಿಸಲಿ ಅಂತ ಮನವಿ ಮಾಡಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಮೇಕೆದಾಟು ಯೋಜನೆಯ ಬಗ್ಗೆ ಕೇಂದ್ರ ಸರ್ಕಾರ ತನ್ನ ನಿಲುವನ್ನು ಬೇಗ ಪ್ರಕಟಿಸಲಿ, ಕೇಂದ್ರದಿಂದ ಕರ್ನಾಟಕ ಮತ್ತು ತಮಿಳುನಾಡು ಎರಡೂ ರಾಜ್ಯಗಳಿಗೆ ತೊಂದರೆಯಾಗುವುದು ಬೇಡವೆಂದು ತಾನು ಕೇಂದ್ರಕ್ಕೆ ತಿಳಿಸಿದ್ದಾಗಿ ಹೇಳಿದರು.

ಇನ್ನೂ ಸ್ಟೀಲ್ ಬ್ರಿಡ್ಜ್ ಹಾಗೂ ಸುರಂಗ ಮಾರ್ಗಕ್ಕೆ ಬಿಜೆಪಿ ವಿರೋಧದ ವಿಚಾರವಾಗಿ, ಕೆಜೆ ಜಾರ್ಜ್ ಸ್ಟೀಲ್ ಬ್ರಿಡ್ಜ್ ಮಾಡಲು ಹೊರಟಾಗ ವಿರೋಧ ಮಾಡಿದ್ರು. ವಿರೋಧ ಪಕ್ಷಗಳು ಟೀಕೆ ಮಾಡಿದಷ್ಟು ಒಳ್ಳೆಯದು. ಸದನದಲ್ಲಿ ಚರ್ಚೆ ಮಾಡುವ ಉದ್ದೇಶದಿಂದ ಸುಮ್ಮನಿದ್ದೇನೆ. ಟನಲ್ ಪರ್ಯಾಯವಾಗಿ ಬೆಂಗಳೂರು ರಸ್ತೆ ಮಾಡಲು ಪರಿಹಾರಕ್ಕೆ ಮೂರು ಲಕ್ಷ ಕೋಟಿ ಬೇಕು ಎಂದು ವಿವರಿಸಿದರು.



ಬೆಂಗಳೂರಿನ ವಿಧಾನಸೌಧ ಆವರಣದಲ್ಲಿ ಫೆ.27ರಿಂದ ಮಾ.3ರವರೆಗೆ ನಡೆಯುವ ಪುಸ್ತಕ ಮೇಳ-2025ರ ಕಾರ್ಯಕ್ರಮದ ಪೂರ್ವ ಸಿದ್ಧತೆಯನ್ನು ಸಭಾಪತಿಗಳಾದ ಬಸವರಾಜ್ ಹೊರಟ್ಟಿ ಹಾಗೂ ವಿಧಾನಸಭೆಯ ಅಧ್ಯಕ್ಷರಾದ ಯು.ಟಿ. ಖಾದರ್ ಅವರು ವೀಕ್ಷಿಸಿ ಆಯೋಜಕರಿಗೆ ಸಲಹೆ-ಸೂಚನೆಗಳನ್ನು ನೀಡಿದರು. ಈ ಸಂದರ್ಭದಲ್ಲಿ ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿಗಳಾದ ಎಂ.ಕೆ. ವಿಶಾಲಾಕ್ಷಿ ಸೇರಿದಂತೆ ವಿಧಾನ ಪರಿಷತ್ತಿನ ಹಾಗೂ ವಿಧಾನಸಭೆಯ ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸೋಮೇಶ್ವರನಿಗೆ ಕ್ಷೀರಾಭಿಷೇಕ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶಿವನ ಆರಾಧನೆಯ ಶಿವರಾತ್ರಿಯ ದಿನ ಸ್ಥಳೀಯ ಎಲ್ಲ ಶಿವನ ದೇವಸ್ಥಾನಗಳು ಭಕ್ತರ ಪರಾಕಾಷ್ಠೆಯಲ್ಲಿ ತುಂಬಿ ತುಳುಕುತ್ತಿತ್ತು. ಶಿವನ ಪೂಜೆಗಾಗಿ ಭಕ್ತರು ಬಿಲ್ವಪತ್ರೆ, ಹೂವು, ವಿವಿಧ ಹಣ್ಣುಗಳನ್ನು ಹಿಡಿದು ಸರದಿ ಸಾಲಿನಲ್ಲಿ ನಿಂತು ದರ್ಶನ ಪಡೆಯುವ ದೃಶ್ಯ ಎಲ್ಲ ದೇವಸ್ಥಾನಗಳಲ್ಲಿ ಸಾಮಾನ್ಯವಾಗಿತ್ತು. ಪಟ್ಟಣದ ಐತಿಹಾಸಿಕ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಬುಧವಾರ ಮಹಾಶಿವರಾತ್ರಿ ನಿಮಿತ್ತ ಶ್ರೀ ಸೋಮೇಶ್ವರನಿಗೆ ವಿಶೇಷ ಪೂಜೆ, ಕ್ಷೀರಾಭಿಷೇಕ, ಮಂಗಳಾರತಿ ಜರುಗಿತು. ಈ ವೇಳೆ ಅರ್ಚಕ ಕೃಷ್ಣಾ ಗ್ರಾಮಪುರೋಹಿತ ಮಾತನಾಡಿ, ಶಿವನನ್ನು ಮೆಚ್ಚಿಸಲು ಕಠೋರ ತಪಸ್ಸು ಮಾಡಬೇಕಿಲ್ಲ. ಕಠಿಣ ಉಪವಾಸ ಅಗತ್ಯವಿಲ್ಲ ಎಂದು ಪುರಾಣದಲ್ಲಿ ಉಲ್ಲೇಖವಿದೆ. ಭಕ್ತಿಯಿಂದ ಶಿವನಿಗೆ ಜಲಾಭಿಷೇಕ ಮಾಡಿದರೆ ಶಿವನು ಪ್ರಸನ್ನನಾಗುತ್ತಾನೆ. ಶಿವನನ್ನು ಜಲಾಭಿಷೇಕಪ್ರಿಯ



ಎಂದು ಕರೆಯುತ್ತಾರೆ. ಅಭಿಷೇಕ ಮಾಡುವುದರಿಂದ ಹೃದಯ ಮತ್ತು ಆತ್ಮವನ್ನು ಶುದ್ಧವಾಗಿತ್ತದೆ ಮತ್ತು ಪವಿತ್ರಗೊಳಿಸುತ್ತದೆ, ಜನ್ಮಜನ್ಮಾಂತರದ ಪಾಪಗಳು ದೂರವಾಗುತ್ತದೆ ಎಂದರು. ಈ ವೇಳೆ 11 ಜನ ಋತ್ವಿಜರು ರುದ್ರ ಪಠಿಸುತ್ತ ಸೋಮೇಶ್ವರನಿಗೆ ಕ್ಷೀರಾಭಿಷೇಕ ಹಾಗೂ ಜಲಾಭಿಷೇಕ ಮಾಡಿದರು. ಶ್ರೀವಲ್ಲಭಶಾಸ್ತ್ರಿ ಸದರಜೋಶಿ, ಎ.ಜಿ. ಕುಲಕರ್ಣಿ, ಎಸ್.ಆರ್. ಕುಲಕರ್ಣಿ, ವಿಶ್ವನಾಥಭಟ್ ಗ್ರಾಮಪುರೊಹಿತ, ಆದರ್ಶ ಕುಲಕರ್ಣಿ, ಅಜಿತ ಕುಲಕರ್ಣಿ, ಮಂಜುನಾಥ ಗ್ರಾಮಪುರೋಹಿತ, ನಾಗೇಶಭಟ್ ಗ್ರಾಮಪುರೋಹಿತ, ರಾಮಕೃಷ್ಣ ಸದರಜೋಶಿ, ಎ.ಎ. ಕುಲಕರ್ಣಿ, ನಾಗರಾಜ ನಾಡಿಗೇರ, ಗಿರೀಶ ಕುಲಕರ್ಣಿ, ಹರೀಶ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ಮುಕುಂದ ಸೂರ್ಯಭಟ್, ಸುಮಂತ ಗ್ರಾಮಪುರೋಹಿತ, ಪವನ ಗ್ರಾಮಪುರೋಹಿತ ಸೇರಿದಂತೆ ಸುಮಂಗಲೆಯರು ಇದ್ದರು.

# ಸದಾ ಎಚ್ಚರಿಕೆಯಲ್ಲಿರುವುದೇ ನಿಜವಾದ ಜಾಗರಣೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಮಹಾ ಶಿವರಾತ್ರಿಯ ಅಂಗವಾಗಿ ಇಲ್ಲಿಯ ವಿವಿಧ ಶಿವ ದೇವಾಲಯಗಳಲ್ಲಿ ಶೃದ್ಧಾ ಭಕ್ತಿಯಿಂದ ಪೂಜೆ ಸಲ್ಲಿಸಲಾಯಿತು.

ಐತಿಹಾಸಿಕ ಮಾಣಿಕೇಶ್ವರ, ಕೋಟಿ ವೀರಭದ್ರೇಶ್ವರ, ಕಾಶಿ ವಿಶ್ವನಾಥ, ವಿರೂಪಾಕ್ಷೇಶ್ವರ, ಹಾಲಗೊಂಡ ಬಸವೇಶ್ವರ, ಮಲ್ಲಿಕಾರ್ಜುನ ದೇವಸ್ಥಾನದಲ್ಲಿರುವ ಶಿವಲಿಂಗಕ್ಕೆ ಹೂವು, ಬಿಲ್ವ ಪತ್ರಿಗಳಿಂದ ಸಿಂಗರಿಸಿ ರುದ್ರಾಭಿಷೇಕ ನೆರವೇರಿಸಲಾಯಿತು. ಬೆಳಿಗ್ಗೆಯಿಂದಲೇ ಉಪವಾಸ ವೃತವನ್ನು ಆಚರಿಸಿದ ಭಕ್ತರು ಸಂಜೆ ಹೂವು, ಹಣ್ಣು, ನೈವೇದ್ಯದೊಂದಿಗೆ ಸಂಕಲ್ಪವನ್ನು ಅರ್ಪಿಸಿದರು.

ಇಲ್ಲಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ




ಶಿವ ಧ್ವಜಾರೋಹಣವನ್ನು ನೆರವೇರಿಸಲಾಯಿತು. ನಂತರ ಬಿ.ಕೆ. ಸರೋಜಕ್ಕ ಅವರ ನೇತೃತ್ವದಲ್ಲಿ ಗ್ರಾಮದ ಪ್ರಮುಖ ಬೀದಿಯಲ್ಲಿ ಶಿವಲಿಂಗ ಮೂರ್ತಿಯನ್ನು ಮೆರವಣಿಗೆ ಮಾಡಲಾಯಿತು. ಸಮೀಪದ ಹರ್ಲಾಪೂರ, ಅಡವಿಸೋಮಾಪೂರ, ಸಂಭಾಪೂರ, ಪಾಪನಾಶಿ, ಕದಾಂಪೂರ ಗ್ರಾಮಗಳಲ್ಲಿ ಶಿವನ ಕುರಿತು ಜಾಗೃತಿಯ ಭಿತ್ತಿ ಪತ್ರಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಬಿ.ಕೆ ಸರೋಜಕ್ಕನವರು, ನಮ್ಮ ದೇಶದಲ್ಲಿ ಹಬ್ಬಗಳು, ದಿನಾಚರಣೆಗಳು, ಉತ್ಸವಗಳನ್ನು ಮಾಡುತ್ತಾ ಬಂದಿದ್ದು, ಇವುಗಳಲ್ಲಿ ಪ್ರಮುಖವಾಗಿದ್ದು ಶಿವರಾತ್ರಿಯಾಗಿದೆ. ಮನುಷ್ಯನಲ್ಲಿ ತುಂಬಿರುವ ಅಜ್ಞಾನವೆಂಬ ರಾತ್ರಿಯನ್ನು ದೂರ ಮಾಡಿ ಜ್ಞಾನದ ಪ್ರಭೆಯನ್ನು ಹರಿಸಲು ಜ್ಯೋತಿ ಸ್ವರೂಪ ಶಿವ ಪರಮಾತ್ಮನು ಈ ಧರೆಗೆ ಬಂದಿರುವ ದಿನವೇ ಮಹಾಶಿವರಾತ್ರಿಯಾಗಿದೆ. ಶಿವನನ್ನು ಅರಿತು ನಿರಂತರ ಧ್ಯಾನಿಸುವುದೇ ಸತ್ಯ ಉಪವಾಸವಾಗಿದೆ.

ದುಷ್ಟ ಸಂಗ, ದುಶ್ಚಟ, ದುರ್ಗುಣ, ದುರಾಭ್ಯಾಸದಿಂದ ನಮ್ಮನ್ನು ರಕ್ಷಿಸುವಂತೆ ಸದಾ ಎಚ್ಚರಿಕೆಯಲ್ಲಿರುವುದೇ ನಿಜವಾದ ಜಾಗರಣೆಯಾಗಿದೆ ಎಂದು ತಿಳಿಸಿದರು.

# ಈಶ್ವರೀಯ ವಿಶ್ವವಿದ್ಯಾಲಯದ ಮಹತ್ವವನ್ನು ಅರಿಯಿರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಏಕಾಗ್ರತೆ ಮತ್ತು ಜ್ಞಾನದ ಕೊರತೆಯಿಂದ ಒಂದಿಲ್ಲೊಂದು ರೀತಿಯಲ್ಲಿ ಮಾನಸಿಕ ಮತ್ತು ದೈಹಿಕ ಸಮಸ್ಯೆ ಎದುರಿಸುತ್ತಿರುವ ಮನುಷ್ಯನಿಗೆ ನೆಮ್ಮದಿ ನೀಡುವ ತಾಣವಾಗಿರುವ ಈಶ್ವರೀಯ ವಿಶ್ವವಿದ್ಯಾಲಯದ ಮಹತ್ವವನ್ನು ಪ್ರತಿಯೊಬ್ಬರೂ ಅರಿತುಕೊಳ್ಳಬೇಕು ಎಂದು ಡಾ. ಪಿ.ಡಿ. ತೋಟದ ಹೇಳಿದರು.

ಅವರು ಬುಧವಾರ ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಿಂದ ಮಹಾ ಶಿವರಾತ್ರಿ ಹಬ್ಬದ ಪ್ರಯುಕ್ತ ಪಟ್ಟಣದ ಪ್ರಮುಖ ಬೀದಿಗಳಲ್ಲಿ ದ್ವಾದಶ ಜ್ಯೋತಿರ್ಲಿಂಗಗಳ ದರ್ಶನದ ಮೆರವಣಿಗೆ ಹಾಗೂ ತ್ರಿಮೂರ್ತಿ ಶಿವನ 89ನೇ ಹುಟ್ಟುಹಬ್ಬ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಡಾ. ಕಲಿವಾಳಮಠ, ಬಸಣ್ಣ ಬೆಂಡಿಗೇರಿ ಮಾತನಾಡಿ, ಪ್ರಸ್ತುತ




ದಿನಗಳಲ್ಲಿ ಒತ್ತಡದ ಬದುಕು ಮೈಗೂಡಿಸಿಕೊಂಡವರು. ಈಶ್ವರೀಯ ವಿಶ್ವವಿದ್ಯಾಲಯಲ್ಲಿರುವ ಜ್ಞಾನ ಸಂಪತ್ತು ಪಡೆದುಕೊಳ್ಳುವ ಮೂಲಕ ಬದುಕು ಸಾರ್ಥಕ ಪಡಿಸಿಕೊಳ್ಳಬೇಕಿದೆ. ಇಲ್ಲಿ ವಿಜೃಂಭಣೆಯಿಂದ ನಡೆಯುತ್ತಿರುವ ಶಿವರಾತ್ರಿಯ ಕಾರ್ಯಕ್ರಮ ಹಾಗೂ ಶಿವನ ಜ್ಞಾನ ನೀಡುವ ಪ್ರವಚನಗಳಲ್ಲಿ ಪ್ರತಿಯೊಬ್ಬರೂ ಭಾಗವಹಿಸಿ ಜ್ಞಾನ ಪಡೆಯಬೇಕು ಎಂದರು.

ಈಶ್ವರೀಯ ವಿಶ್ವವಿದ್ಯಾಲಯದ ಬಿ.ಕೆ. ನಾಗಲಾಂಬಿಕೆ ಮಾತನಾಡಿ, ಶಿವರಾತ್ರಿಯಲ್ಲಿ ಆಚರಿಸಲ್ಪಡುವ ಶಿವಜಯಂತಿಯ ಮಹತ್ವವನ್ನು ವಿವರಿಸಿದರು. ಪಟ್ಟಣದ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ 89ನೇ ತ್ರಿಮೂರ್ತಿ ಶಿವ ಜಯಂತಿ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿತ್ತು. ಬೆಳಿಗ್ಗೆ 10 ಗಂಟೆಗೆ ದ್ವಾದಶ ಜ್ಯೋತಿರ್ಲಿಂಗಗಳ ಭವ್ಯ ಮೆರವಣಿಗೆಯಲ್ಲಿ ಡೊಳ್ಳು ಕುಣಿತ, ಪೂರ್ಣ ಕುಂಭಗಳನ್ನು ಹೊತ್ತ ಮಹಿಳೆಯರು ಹಾಗೂ ಪ್ರಮುಖರೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ. ಎಸ್.ಜಿ. ಹೂವಿನ್, ಡಾ. ಪ್ರಸನ್ನ ಕುಲಕರ್ಣಿ, ಡಾ. ನಾಗರಾಜ ವಾಲಿ, ವೆಂಕಟೇಶ ಮಾತಾಡೆ, ಶಕ್ತಿ ಕತ್ತಿ, ಎಂ.ಕೆ. ಕಳ್ಳಿಮಠ, ಡಿ.ಎಂ. ಪೂಜಾರ, ಬಸವರಾಜ ಸಂಗಪ್ಪಶೆಟ್ಟರ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ಶಿವಧ್ಯಾನದಿಂದ ಅಜ್ಞಾನ ದೂರ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣ ಸೇರಿದಂತೆ ಹೋಬಳಿಯಾದ್ಯಂತ ಬುಧವಾರ ಶಿವಮಂದಿರಗಳಲ್ಲಿ ಶಿವನಿಗೆ ವಿಶೇಷ ಅಭೀಷೇಕ, ಪೂಜೆ ಸಲ್ಲಿಸುವ ಮೂಲಕ ಭಕ್ತಾದಿಗಳು ಶ್ರದ್ಧಾಭಕ್ತಿಯಿಂದ ಶಿವರಾತ್ರಿಯನ್ನು ಆಚರಿಸಿದರು. ಪಟ್ಟಣದ ಚಂದ್ರಮೌಳೇಶ್ವರ, ಸೋಮೇಶ್ವರ, ತ್ರಿಪುರಾಂತಕೇಶ್ವರ, ನಾರಾಯಣ, ಶ್ರೀಶೈಲ ಮಲ್ಲಿಕಾರ್ಜುನ, ಕಲ್ಮೇಶ್ವರ, ಭೂತನಾಥೇಶ್ವರ ಸೇರಿದಂತೆ ವಿವಿಧ ದೇವಾಲಯಗಳಲ್ಲಿ ಬೆಳಗ್ಗೆಯಿಂದಲೇ ಭಕ್ತರು ಸಾಲುಗಟ್ಟಿ ನಿಂತು ಶಿವಲಿಂಗಗಳ ದರ್ಶನ ಪಡೆದರು.

ಈಶ್ವರೀಯ ವಿಶ್ವವಿದ್ಯಾಯದಲ್ಲಿ: ಇಂದಿನ ದಿನಗಳಲ್ಲಿ ಜನರು ಭಗವಂತನ ಜ್ಞಾನವಿಲ್ಲದೆ ಕುರುಡರಾಗಿದ್ದಾರೆ. ಜಗತ್ತಿಗೆ ಭಗವಂತ ಶಿವ ಒಬ್ಬನೇ ಆಗಿದ್ದು, ಆತನನ್ನು ಧ್ಯಾನಿಸುವುದರಿಂದ ಮನಸ್ಸಿಗೆ ನೆಮ್ಮದಿ-ಶಾಂತಿ ದೊರೆಯುತ್ತದೆ ಎಂದು ಈಶ್ವರೀಯ ವಿಶ್ವವಿದ್ಯಾಯದ ಸಂಚಾಲಕಿ ಬ್ರಹ್ಮಕುಮಾರಿ ಸವಿತಕ್ಕ ಹೇಳಿದರು.

ಪಟ್ಟಣದ ಈಶ್ವರಿ ವಿಶ್ವವಿದ್ಯಾಲಯ ಕೇಂದ್ರದಲ್ಲಿ ಬುಧವಾರ ಶಿವರಾತ್ರಿ ಪ್ರಯುಕ್ತ ದ್ವಾದಶ ಜೋತಿರ್ಲಿಂಗಗಳ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಜ್ಯೋತಿರ್ ಬಿಂದು ಸ್ವರೂಪಿ ಶಿವನು ಈ ಭೂಮಿಯ ಮೇಲೆ ಅವತರಿಸಿದ್ದಾನೆ. ಶಿವನು ಮನುಷ್ಯರಾತ್ಮ ಕಲ್ಯಾಣಾರ್ಥವಾಗಿ ಸರ್ವರಿಗೂ ಸತ್ಯ ಜ್ಞಾನವನ್ನು ನೀಡುತ್ತಾನೆ. ಶಿವರಾತ್ರಿಯಂದು ಎಲ್ಲ ರೀತಿಯ ಮನೋದೌರ್ಬಲ್ಯಗಳನ್ನು ದೂರ ಮಾಡಿ, ಪರಮಾತ್ಮ ಶಿವನನ್ನು ಸ್ಮರಿಸಿದರೆ ಸಂಪೂರ್ಣ ಸುಖ, ಶಾಂತಿ ದೊರೆಯುತ್ತದೆ. ಅಜ್ಞಾನ, ಅಂಧಕಾರವನ್ನು ಮನದಿಂದ ತೆಗೆಯಿರಿ. ಜ್ಞಾನದ ಹಣತೆಯನ್ನು ಹಚ್ಚಿರಿ. ಮನುಷ್ಯತ್ವ ಅರಿತು ಶಿವನನ್ನು ಸದಾ ಆರಾಧಿಸಿ ಎಂದರು.

ಮಲ್ಲಿಕಾರ್ಜುನ ಕಾತರಕಿ, ಲಿಂಗರಾಜ ಬೊಪಳಾಪುರ, ಬಸವಣ್ಣೆಪ್ಪ ಬಳಿಗೇರ, ಮಲ್ಲೇಶ ಪೂಜಾರ ವೀರೇಶ ತಳವಾರ, ವೀರಣ್ಣ ಹತ್ತಿಕಟಗಿ, ಬಾಬು ನೀರಲೋಟಿ, ರವಿ ದೇವರಡ್ಡೆ, ಹನಮಂತಪ್ಪ ರಾಚನಗೌಡ್ರ, ನಾಗರತ್ನಾ ಬಾಣದ, ಬಿ.ಜಿ. ಶಿರ್ಸಿ, ಅನ್ನಪೂರ್ಣ ರೊಟ್ಟಿ, ಸುಶೀಲಾ ಬೊಪಳಾಪೂರ, ಕೆ.ವಿ. ಕಟ್ಟಿ, ನಿಲ್ಲಮ್ಮ ಬೊಪಳಾಪುರ, ನಿರ್ಮಲಾ ಅಂಗಡಿ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka